ಸಂಪುಟ 01 | ಸಂಚಿಕೆ 146 | ಶನಿವಾರ 01 ಆಗಸ್ಟ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಶ್ವಾಸಕೋಶ ಕ್ಯಾನ್ಸರ್ ದಿನ (World Lung Cancer Day) ಶ್ವಾಸಕೋಶ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸುವ ಹಾಗೂ ಮುನ್ನೆಚ್ಚರಿಕೆ, ತಪಾಸಣೆ ಮತ್ತು ಚಿಕಿತ್ಸೆಯ ಮಹತ್ವವನ್ನು ತಿಳಿಸುವ ದಿನ.

2) ವಿಶ್ವ ವೈಡ್ ವೆಬ್ ದಿನ (World Wide Web Day) ?ವಿಶ್ವ ವೈಡ್ ವೆಬ್ (WWW) ಮಾನವ ಜೀವನ, ಶಿಕ್ಷಣ, ಸಂವಹನ ಮತ್ತು ಮಾಹಿತಿ ಹಂಚಿಕೆಯಲ್ಲಿ ಮಾಡಿದ ಕ್ರಾಂತಿಕಾರಿ ಬದಲಾವಣೆಗಳನ್ನು ಸ್ಮರಿಸುವ ದಿನ.

3) ವ್ಯಸನಮುಕ್ತ ದಿನಾಚರಣೆ ಡಾ. ಮಹಾಂತ ಶಿವಯೋಗಿ ಮಹಾಸ್ವಾಮೀಜಿಯವರ ಜನ್ಮದಿನದ ಅಂಗವಾಗಿ, ಅವರ ವ್ಯಸನಮುಕ್ತ ಸಮಾಜ ನಿರ್ಮಾಣದ ಮಹತ್ತರ ಸಂದೇಶವನ್ನು ಜನಮನಗಳಿಗೆ ತಲುಪಿಸುವ ಉದ್ದೇಶದಿಂದ ಕರ್ನಾಟಕದಾದ್ಯಂತ ಪ್ರತಿವರ್ಷ ಆಗಸ್ಟ್ 1ರಂದು 'ವ್ಯಸನಮುಕ್ತ ದಿನಾಚರಣೆ'*ಯನ್ನು ಆಚರಿಸಲಾಗುತ್ತದೆ.

## ಸುಭಾಷಿತ

ನಿಮ್ಮನ್ನು ನೀವು ಅರಿತುಕೊಳ್ಳುವವರೆಗೆ
ನೀವು ಶಾಂತಿಯಿಂದ ಇರಲು ಸಾಧ್ಯವಿಲ್ಲ.

-ಜಿಡ್ಡು ಕೃಷ್ಣಮೂರ್ತಿ

# ಆಗಸ್ಟ್. 13ಕ್ಕೆ ಕರ್ನಾಟಕ ಬಂದ್

❏ ನೈಜ್ಯ ದೆಸೆ ನ್ಯೂಸ್



**ಬೆಂಗಳೂರು/ಮಂಡ್ಯ: ಯಾವುದೇ ಕಾರಣಕ್ಕೂ ತಮಿಳುನಾಡಿಗೆ ಕಾವೇರಿ ನದಿ ನೀರು ಹರಿಸಬಾರದು ಎಂದು ಒತ್ತಾಯಿಸಿ ಕನ್ನಡಪರ ಸಂಘಟನೆಗಳು, ರೈತ ಸಂಘಟನೆಗಳು ಹಾಗೂ ಎಲ್ಲಾ ಅಸಂಘಟಿತ ಕಾರ್ಮಿಕರ ಜೊತೆಗೂಡಿ ಆ.13 ರಂದು ಅಖಂಡ ಕರ್ನಾಟಕ ಬಂದ್‌ಗೆ ಕರೆ ನೀಡಲಾಗಿದೆ. ರಾಜ್ಯಸರ್ಕಾರ ಹಾಗೂ ವಿಪಕ್ಷಗಳ ಧೋರಣೆಯನ್ನು ಕಟುವಾಗಿ ಟೀಕಿಸಿರುವ ಕನ್ನಡಪರ ಸಂಘಟನೆ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್, ಎಲ್ಲಾ ನಾಟಕಗಳನ್ನು ನಿಲ್ಲಿಸಿ ಕೂಡಲೇ ತುರ್ತು ಸದನ ಕರೆದು ಒಗ್ಗಟ್ಟು ಪ್ರದರ್ಶಿಸಿ ಎಂದು ಒತ್ತಾಯಿಸಿದ್ದಾರೆ. ಯಾರು, ಏನೇ ಹೇಳಿದರೂ ಅದಕ್ಕೆ ಕಿವಿಗೊಡಬೇಡಿ.**

ರಾಜ್ಯದ ಜನರ ಹಾಗೂ ರೈತರ ಹಿತ ಕಾಯುವ ಜವಾಬ್ದಾರಿ ಹೊತ್ತಿರುವ ರಾಜ್ಯಸರ್ಕಾರ ಹಾಗೂ ವಿಪಕ್ಷ ಶಾಸಕರು ಒಗ್ಗಟ್ಟು ಪ್ರದರ್ಶಿಸುವುದು ಅನಿವಾರ್ಯವಾಗಿದ್ದು, ನೀವು ರಾಜ್ಯದ ಜನರಿಗೆ ನಿಮ ಟೀಕೆ, ಟಿಪ್ಪಣಿ ಮಾತುಗಳು ಬೇಕಾಗಿಲ್ಲ. ಜೀವಜಲದ ಬಗ್ಗೆ ನೀವು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕಾಗುತ್ತದೆ. ಇದರಲ್ಲಿ ಯಾವುದೇ ರಾಜಕೀಯ ಬೆರೆಸಬೇಡಿ ಎಂದು ಕಿಡಿಕಾರಿದ್ದಾರೆ. ಕೇವಲ ನೀವು ಸರ್ವಪಕ್ಷ ಸಭೆ, ಕೆಆರ್‌ಎಸ್‌ಗೆ ಮುತ್ತಿಗೆ ಹಾಕಿ ನೀವು ಹೋರಾಟ ಮಾಡಿ, ನಾಟಕ ಮಾಡಬೇಡಿ, ನಿಮ ಇಚ್ಛಾಶಕ್ತಿ ಪ್ರದರ್ಶಿಸಬೇಕು. ಮಳೆ ಕೊರತೆಯಿಂದ ಬರ, ಬೆಳೆಹಾನಿ ಸೇರಿದಂತೆ ಅನೇಕ ಸಮಸ್ಯೆಗಳು ರಾಜ್ಯದಲ್ಲಿ ತಾಂಡವವಾಡುತ್ತಿರುವಾಗ ಯಾವುದೇ ಕಾರಣಕ್ಕೂ ನೀವು ನೀರು ಬಿಡಬೇಡಿ.

ಈ ಹಿಂದೆ 1967 ರಲ್ಲಿ ಕರುಣಾನಿಧಿಯವರು ನಿಜಲಿಂಗಪ್ಪ ಅವರ ಜೊತೆ ಮಾತುಕತೆ ಮಾಡಿದರು. ಪ್ರೀತಿ, ಅಭಿಮಾನದಿಂದ ತೀರ್ಮಾನ ಮಾಡಿ ಎರಡೂ ರಾಜ್ಯದ ರೈತರ ಮನವೊಲಿಸಲಾಗಿತ್ತು. ಆದರೆ ಇಂದು ಎಲ್ಲೋ ಕೂತುಕೊಂಡು 3,500 ಕ್ಯೂಸೆಕ್?ಸ ನೀರು ಬಿಡಿ ಎಂದು ಹೇಳುತ್ತಾರೆ. ಇಷ್ಟು ಪ್ರಮಾಣದ ನೀರು ಕೆಆರ್‌ಎಸ್ ಮೈದಾನವಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ತಮಿಳುನಾಡು ಮುಖ್ಯಮಂತ್ರಿ ಬೆಂಗಳೂರಿಗೆ ಬರುವುದರಿಂದ ಏನು ಪ್ರಯೋಜನ? ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಅವರೇ ದಿಟ್ಟ ನಿರ್ಧಾರ ಕೈಗೊಂಡು ರಾಜ್ಯದ ಹಿತ ಕಾಯಬೇಕು ಎಂದು ಒತ್ತಾಯಿಸಿದರು.ರಾಜ್ಯದ ಜನತೆಯ ಪರವಾಗಿ ಆ.13 ರಂದು ಬೆಳಿಗ್ಗೆ 6 ರಿಂದ ಸಂಜೆ 6 ರವರೆಗೆ ರಾಜ್ಯಾದ್ಯಂತ ಬಂದ್ ನಡೆಯಲಿದೆ. ಪುರಭವನದಿಂದ ಫ್ರೀಡಂ ಪಾರ್ಕ್‌ವರೆಗೆ ಬೃಹತ್ ಜಾಥಾ ನಡೆಸಲಾಗುವುದು ಎಂದರು.

ಎಲ್ಲಾ ನಾಗರಿಕರಿಗೆ ಕೈ ಮುಗಿದು ಬೇಡುತ್ತಿದ್ದೇನೆ. ಹೋಟೆಲ್ ಸಂಘದವರು, ಚಾಲಕ ಸಂಘದವರು, ಅಸಂಘಟಿತ ಕಾರ್ಮಿಕ ಸಂಘಟನೆಗಳು, ಚಿತ್ರರಂಗ ಸೇರಿದಂತೆ ಎಲ್ಲಾ ವಲಯದವರೂ ಸ್ಪಂದಿಸಬೇಕು. ನೈತಿಕ ಬೆಂಬಲ ಎಂಬುದನ್ನು ಬಿಟ್ಟು ಸಕ್ರಿಯವಾಗಿ ಬಂದ್‌ಗೆ ಎಲ್ಲರೂ ಬೆಂಬಲ ನೀಡಬೇಕು ಎಂದು ಅವರು ಮನವಿ ಮಾಡಿದರು. ಯಾವುದೇ ಒತ್ತಡಕ್ಕೆ ಮಣಿದು ನೀರು ಬಿಟ್ಟರೆ ಹಿಂದೆಂದೂ ಕಾಣದ ಉಗ್ರ ಹೋರಾಟವನ್ನು ನಡೆಸಬೇಕಾಗುತ್ತದೆ. ಈಗಾಗಲೇ ಮಂಡ್ಯ ಸೇರಿದಂತೆ ವಿವಿಧೆಡೆ ಹೋರಾಟ ನಡೆಯುತ್ತಿದೆ. ಇದು ಇನ್ನಷ್ಟು ಹೆಚ್ಚಿ ಪರಿಸ್ಥಿತಿ ಕೈ ಮೀರಲು ಸರ್ಕಾರ ಬಿಡಬಾರದು ಎಂದು ಮನವಿ ಮಾಡಿದರು. ನಿರಂತರವಾಗಿ ಕಾವೇರಿ ವಿಷಯದಲ್ಲಿ ಆಗುತ್ತಿರುವ ಅನ್ಯಾಯವನ್ನು ಖಂಡಿಸಲಾಗುವುದು ಎಂದು ವಾಟಾಳ್ ನಾಗರಾಜ್, ಸಾ.ರಾ.ಗೋವಿಂದ್, ಕೆ.ಆರ್.ಕುಮಾರ್, ಪ್ರವೀಣ್‌ಕುಮಾರ್ ಶೆಟ್ಟಿ, ಶಿವರಾಮೇಗೌಡ ಸೇರಿದಂತೆ ಹಲವು ಕನ್ನಡ ಪರ ಸಂಘಟನೆಗಳ ಮುಖಂಡರು ಪಾಲ್ಗೊಂಡಿದ್ದರು.

**ಬಿಜೆಪಿ ಪ್ರತಿಭಟನೆ :** ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಬಿಡಬಾರದು. ರೈತರ ಹಿತವನ್ನು ಬಲಿ ಕೊಡಬಾರದು ಎಂದು ಆಗ್ರಹಿಸಿ ಇಂದು ಬೆಳಿಗ್ಗೆ ಪ್ರತಿಪಕ್ಷ ಬಿಜೆಪಿ ಮುಖಂಡರು, ಕಾರ್ಯಕರ್ತರು ಕೆಆರ್‌ಎಸ್‌ಗೆ ಮುತ್ತಿಗೆ ಹಾಕುವ ಯತ್ನ ನಡೆಸಿದರು.ಅಲ್ಲದೆ ವಿವಿಧ ಕನ್ನಡಪರ ಸಂಘಟನೆಗಳು ತಮಿಳುನಾಡಿಗೆ ನೀರು ಬಿಡುವ ತೀರ್ಮಾನದಿಂದ ರಾಜ್ಯದ ರೈತರಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿ ಖಾಲಿ ಕೊಡಗಳ ಪ್ರದರ್ಶನ ನಡೆಸಿದರು. ಕೆಆರ್‌ಎಸ್ ಜಲಾಶಯದಲ್ಲಿ ಸಾಂಕೇತಿಕವಾಗಿ ಹುಲ್ಲು ತಿನ್ನುವ ಮೂಲಕ ಅಸಹಾಯಕ ಪರಿಸ್ಥಿತಿಯನ್ನು ಪ್ರದರ್ಶಿಸಿದರು.

ಕರ್ನಾಟಕ ರಕ್ಷಣಾ ವೇದಿಕೆ, ಕನ್ನಡಿಗರ ರಕ್ಷಣಾ ವೇದಿಕೆ, ವಿವಿಧ ರೈತಪರ ಸಂಘಟನೆಗಳು, ಸ್ಥಳೀಯ ನಾಗರಿಕ ಸಂಘಟನೆಗಳ ಕಾರ್ಯಕರ್ತರು ಕೆಆರ್‌ಎಸ್ ದ್ವಾರದ ಬಳಿ ತಮಿಳುನಾಡು ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್ ಅವರ ಭಾವಚಿತ್ರವಿರುವ ಪೋಸ್ಟರ್‌ಗಳನ್ನು ಹಿಡಿದು ಪ್ರತಿಭಟಿಸಿ ಧಿಕ್ಕಾರದ ಘೋಷಣೆಗಳನ್ನು ಕೂಗಿದರು. ಸಿಡಬ್ಲ್ಯುಎಂಎ ತೀರ್ಪಿನ ವಿರುದ್ಧವೂ ಕೂಡಾ ಘೋಷಣೆಗಳನ್ನು ಮೊಳಗಿಸಿದರು. ರಾಜ್ಯದಲ್ಲಿ ಮಳೆ ಕೊರತೆ ಹಿನ್ನೆಲೆಯಲ್ಲಿ ಜಲಾಶಯಗಳಲ್ಲಿ ನೀರಿಲ್ಲ. ಇಂತಹ ಪರಿಸ್ಥಿತಿಯಲ್ಲಿ ನೀರು ಬಿಡಲು ಆದೇಶಿಸಿರುವ ಕ್ರಮ ಖಂಡನೀಯ ಎಂದರು.

## ಮಸ್ಕಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಶಾಸಕ ಆರ್ ಬಸನಗೌಡ ತುರ್ವಿಹಾಳ ಬೇಟಿ, ಆಹಾರ ಧಾನ್ಯಗಳ ಪರಿಶೀಲನೆ

❏ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಮಸ್ಕಿ ಪಟ್ಟಣದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಸೇರಿದಂತೆ ವಿವಿಧ ವಸತಿ ಶಾಲೆಗಳಿಗೆ ಖಾದಿ ಗ್ರಾಮೋದ್ಯೋಗ ನಿಗಮದ ಅಧ್ಯಕ್ಷ ಶಾಸಕ ಆರ್ ಬಸನಗೌಡ ತುರುವಿಹಾಳ ಶುಕ್ರವಾರ ಭೇಟಿ ನೀಡಿ ಆಹಾರ ಧಾನ್ಯಗಳನ್ನು ಪರಿಶೀಲನೆ ನಡೆಸಿದರು.**



ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸರ್ಕಾರದಿಂದ ಮಕ್ಕಳ ವಿದ್ಯಾಭ್ಯಾಸ ಹಾಗೂ ಆರೋಗ್ಯ ಸೇರಿದಂತೆ ವಸತಿ ಶಾಲೆಗಳಲ್ಲಿ ಮೂಲ ಸೌಲಭ್ಯಗಳಿಗಾಗಿ ಅನುದಾನವನ್ನು ನೀಡುತ್ತದೆ. ಆದ್ದರಿಂದ ಶಾಲಾ ಪ್ರಾಂಶುಪಾಲರು ಹಾಗೂ ವಾರ್ಡನ್ ಗಳು ಮುಖ್ಯವಾಗಿ ಮಕ್ಕಳ ಆರೋಗ್ಯದ ಕಡೆಗೆ ಹೆಚ್ಚಿನ ಗಮನವಹಿಸಿ ಮಕ್ಕಳಿಗೆ ಉತ್ತಮ ಗುಣಮಟ್ಟದ ಆಹಾರವನ್ನು ನೀಡಬೇಕು ಹಾಗೂ ಸಮಯಕ್ಕೆ ಸರಿಯಾಗಿ ಮಕ್ಕಳ ಆರೋಗ್ಯ ತಪಾಸಣೆಯನ್ನು ಮಾಡಿಸಿ ಎಂದು ಸೂಚಿಸಿದರು. ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆ ಸಮಿತಿಯ ತಾಲೂಕು ಅಧ್ಯಕ್ಷ ಮೈಬುಸಾಬ್ ಮುದ್ದಾಪುರ್, ಕಾಂಗ್ರೆಸ್ ಗ್ರಾಮೀಣ ಘಟಕದ ಅಧ್ಯಕ್ಷ ಹನುಮಂತಪ್ಪ ಮುದ್ದಾಪುರ್, ಪ್ರಾಂಶುಪಾಲರಾದ ನಾಗೇಶ್ ಸೇರಿದಂತೆ ಇನ್ನಿತರ ಶಿಕ್ಷಕರು ಹಾಗೂ ಮುಖಂಡರಿದ್ದರು

## ಸಂಕಷ್ಟಗಳನ್ನು ಮೆಟ್ಟಿನಿಲ್ಲಲು ಗುರುವಿನ ಆಶೀರ್ವಾದದ ಬಲ ಬೇಕು : ಪ್ರಾಚಾರ್ಯ ಘನಮಠಯ್ಯ ಹಿರೇಮಠ

❏ ನೈಜ್ಯ ದೆಸೆ ನ್ಯೂಸ್



**ಬಳ್ಳಾರಿ / ಕಂಪ್ಲಿ: ಗುರುವಿನ ತತ್ವಾದರ್ಶ, ಉಪದೇಶಗಳನ್ನು ಪಾಲಿಸಿದರೆ ಹಸನಾದ ಬದುಕು ಸಾಗಿಸಲು ಸಾಧ್ಯ ಎಂದು ಸಾಂಗತ್ರಯ ಸಂಸ್ಕೃತ ಪಾಠಶಾಲೆ ಪ್ರಾಚಾರ್ಯ ಘನಮಠಯ್ಯ ಹಿರೇಮಠ ಹೇಳಿದರು.**

ಗೊಗ್ಗ ವಿಶಾಲಾಕ್ಷಮ್ಮ ಸ್ಮರಣಾರ್ಥ ಗುರುಮಠದಲ್ಲಿ ಓಡ್ಡೋ ಶಿವಾನಂದಾಶ್ರಮದಿಂದ ಆಯೋಜಿಸಿದ್ದ 264ನೇ ಹುಣ್ಣಿಮೆ ಕಾರ್ಯಕ್ರಮದಲ್ಲಿ ಗುರುವಿನ ಮಹತ್ವ ಕುರಿತು ಉಪನ್ಯಾಸ ನೀಡಿ, ಬಾಳಿನಲ್ಲಿ ಬರುವ ಸಂಕಷ್ಟಗಳನ್ನು ಮೆಟ್ಟಿನಿಲ್ಲಲು ಗುರುವಿನ ಆಶೀರ್ವಾದದ ಬಲ ಮುಖ್ಯ ಎಂದರು. ಕಲ್ಲುಡಿ ಬಸಂತಮ್ಮ ರಚಿಸಿದ ಶ್ರೀ ಶರಣವೀರ ಗೊಲ್ಲಾಳ ನಾಟಕವನ್ನು ಸಾಂಗತ್ರಯ ಸಂಸ್ಕೃತ ಪಾಠಶಾಲೆ ವಿದ್ಯಾರ್ಥಿಗಳಾದ ಜಗದೀಶ್ ಪಾರ್ವತಿಯಾಗಿ, ಶಿವಕುಮಾರ್ ಪರಮೇಶ್ವರನಾಗಿ, ಹೇಳಿಕೆ ವೀರಯ್ಯ ಗೊಲ್ಲಾಳನಾಗಿ, ವಿಜಯಕುಮಾರ್ ಮಲ್ಲಪ್ಪನಾಗಿ, ವರುಣ್ಕಲಾವಿದರಾದ ಜಗದೀಶ್, ಶಿವಕುಮಾರ್, ವಿಜಯಕುಮಾರ್, ವರುಣ್ ಇತರರು ಅಭಿನಯಿಸಿದರು ಮಲ್ಲಮ್ಮಳಾಗಿ ಅಭಿನಯಿಸಿದರು.

ಪ್ರಮುಖರಾದ ಡಾ.ಮೃತ್ಯುಂಜಯ ರುಮಾಲೆ, ಗೊಗ್ಗ ಶಾಂತಾ, ಚನ್ನಬಸವರಾಜ, ಗೊಗ್ಗ ಶೋಭಾ ಗುರುಸಿದ್ದಯ್ಯ, ಶಾರದಾ ಬಸವಲಿಂಗಯ್ಯ, ಮಂಜುಳಾ ಸತೀಶ್, ಎಸ್.ಡಿ.ಬಸವರಾಜ, ಕೆ.ಎಂ. ಚಂದ್ರಶೇಖರಸ್ವಾಮಿ, ಎಚ್.ಎಂ.ಜಗದೀಶ, ಮೆಟ್ರಿ ಯೋಗಾಚಾರ್, ಕಲ್ಲುಡಿ ನಾಗರತ್ನ ಇತರರಿದ್ದರು.

## ರಾಜ್ಯ ಬಿಜೆಪಿ ತಂಡದಿಂದ ಬರ ವೀಕ್ಷಣೆ ರೈತರಿಗೆ ಧೈರ್ಯ ತುಂಬಿದ ಮುಖಂಡರು

❏ ನೈಜ್ಯ ದೆಸೆ ನ್ಯೂಸ್



**ತಾಳಿಕೋಟೆ: ರಾಜ್ಯದಲ್ಲಿ ಈ ಬಾರಿ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಬರಗಾಲದ ಸ್ಥಿತಿ ನಿರ್ಮಾಣವಾಗಿ ರೈತಾಪಿ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಹಿನ್ನೆಲೆಯಲ್ಲಿ ರೈತರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಒದಗಿಸುವ ಉದ್ದೇಶದಿಂದ ರಾಜ್ಯ ಬಿಜೆಪಿ ಪಕ್ಷವು ಮುಖಂಡರ ವಿವಿಧ ತಂಡಗಳನ್ನು ರಚಿಸಿ, ಬರ ವೀಕ್ಷಣೆ ಹಾಗೂ ರೈತರೊಂದಿಗೆ ಸಂವಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.**

ಈ ಕಾರ್ಯಕ್ರಮದ ಅಂಗವಾಗಿ ಗುರುವಾರ ವಿಧಾನ ಪರಿಷತ್ ಸದಸ್ಯರಾದ ಎನ್. ರವಿಕುಮಾರ ಹಾಗೂ ಬಿಜೆಪಿ ರಾಜ್ಯ ರೈತ ಮೋರ್ಚಾ ಅಧ್ಯಕ್ಷರಾದ ಎ.ಎಸ್. ಪಾಟೀಲ್ ನಡಹಳ್ಳಿ ಅವರು ಪಕ್ಷದ ಮುಖಂಡರೊಂದಿಗೆ ತಾಳಿಕೋಟೆ ತಾಲೂಕಿನ ಮೂಕಿಹಾಳ ಹಾಗೂ ಮಿಣಜಗಿ ಗ್ರಾಮಗಳಿಗೆ ಭೇಟಿ ನೀಡಿ, ರೈತರ ಜಮೀನುಗಳನ್ನು ಪರಿಶೀಲಿಸಿದರು. ಬಳಿಕ ರೈತರೊಂದಿಗೆ ನೇರವಾಗಿ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿ, ಸರ್ಕಾರದಿಂದ ಸೂಕ್ತ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿ ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಸೇರಿದಂತೆ ಹಲವು ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ರೈತರು ಉಪಸ್ಥಿತರಿದ್ದರು.

## ಮುಖ್ಯ ಗುರುಮಾತೆಗೆ ಬೀಳ್ಕೊಡುವ ಕಾರ್ಯಕ್ರಮ

❏ ನೈಜ್ಯ ದೆಸೆ ನ್ಯೂಸ್



**ತಾಳಿಕೋಟಿ: ತಾಲೂಕಿನ ಬ. ಸಾಲವಾಡಗಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರು ಮಾತೆ ಬನಶಂಕರಿ ಎಸ್ ಅಂಕದ ಅವರು ಶುಕ್ರವಾರ (ಜುಲೈ 31) ನಿವೃತ್ತರಾದ ಹಿನ್ನೆಲೆಯಲ್ಲಿ ಅವರನ್ನು ಶಾಲೆಯ ವತಿಯಿಂದ ಗೌರವಿಸಿ ಬಿಳ್ಕೊಡಲಾಯಿತು.**

ಕಾರ್ಯಕ್ರಮದಲ್ಲಿ ಎಸ್ ಡಿಎಂಸಿ ಅಧ್ಯಕ್ಷರು, ಗ್ರಾಮದ ಹಿರಿಯರು,ಶಿಕ್ಷಕರು ಹಾಗೂ ಅವರ ಬಂಧುಗಳು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ನಿವೃತ್ತರ ಮುಖ್ಯಗುರುಮಾತೆಯರು ಎಲ್ಲಾ ವಿದ್ಯಾರ್ಥಿಗಳಿಗೆ ನೋಟ್ ಬುಕ್, ಪೆನ್ನು ಹಾಗೂ ಸಿಹಿ ತಿಂಡಿಯನ್ನು ವಿತರಿಸಿದರು.

ಸಮಾರಂಭದಲ್ಲಿ ಭಾಗವಹಿಸಿರುವ ಎಲ್ಲರೂ ನಿವೃತ್ತರಾದ ಮುಖ್ಯಗುರು ಮಾತೆಯವರಿಗೆ ಅವರ ವಿಶ್ರಾಂತ ಬದುಕು ಶಾಂತಿ ನೆಮ್ಮದಿಯಿಂದ ಕೂಡಿರಲಿ ಎಂದು ಹಾರೈಸಿ ಅವರ ಅನುಪಮಾ ಸೇವೆಗಾಗಿ ಧನ್ಯವಾದಗಳನ್ನು ತಿಳಿಸಿದರು.

# ಅಲ್ಪಸಂಖ್ಯಾತರ ಮುರಾರ್ಜಿ ವಸತಿ ಶಾಲೆಯಲ್ಲಿ ಉಪಹಾರ ಸೇವಿಸಿ 21 ಮಕ್ಕಳು ಅಸ್ತವ್ಯಸ್ತ

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರ್: ಅಲ್ಪಸಂಖ್ಯಾತರ ಮುರಾರ್ಜಿ ವಸತಿ ನಿಲಯದಲ್ಲಿ ಬಾಳು ಉಳ ಬಿದ್ದ ಊಟ ಸೇವಿಸಿ 21 ಕಿಂತ ಹೆಚ್ಚು ಮಕ್ಕಳು ವಾಂತಿ ಭೇದಿ ಹೊಟ್ಟೆ ನೋವು ಕಾಣಿಸಿಕೊಂಡು ಹಸ್ತವ್ಯಸ್ತವಾಗಿ ತಾಯಿ ಮಕ್ಕಳು ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿದ್ದಾರೆ ತಾಲೂಕಿನ ಒಳಬಳ್ಳಾರಿ ರಸ್ತೆಯಲ್ಲಿರುವ ಅಲ್ಪಸಂಖ್ಯಾತರ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಇಂದು ಮುಂಜಾನೆ ಫಲವೂ ಮಾಡಿದ್ದು ಮಕ್ಕಳು ಸೇವನೆ ಮಾಡಿರುವುದರಿಂದ ಪಲಾವ ದಲ್ಲಿ ಹುಳ ಕಂಡು ಬಂದಿದ್ದು ಇದರಿಂದ ಕೆಲವು ಮಕ್ಕಳು ವಾಂತಿ ಮಾಡಿಕೊಂಡರೆ.**

ಇನ್ನೂ ಕೆಲವು ಮಕ್ಕಳಿಗೆ ತಲೆನೋವು ಚಕ್ರ ಬರತೊಡಗಿದ ಮೇಲೆ ವಸತಿ ನಿಲಯದ ನಿಲಯದ ವಾರ್ಡನ್ ಅಮರಗುಂಡಪ್ಪ ಮಕ್ಕಳನ್ನು ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲೆ ಮಾಡಿಸಿದರು ಮೊದಲು ಎರಡು ಮೂರು ಮಕ್ಕಳು ನಂತರ 20ಕ್ಕೂ ಮೇಲ್ಪಟ್ಟು ಮಕ್ಕಳು ಅಸ್ತವ್ಯಸ್ತಗೊಂಡ ಕಾರಣ ಆಸ್ಪತ್ರೆಗೆ ದಾಖಲು ಮಾಡಲಾಗಿದೆ ವಿಷಯ ತಿಳಿದು ಕೆ .ಡಿ.ಪಿ ಜಿಲ್ಲಾ ಸದಸ್ಯರಾದ ಶಫಿವುಲ್ಲಾ ಖಾನ್ ರವರು ಮತ್ತು ಹರೂನ್ ಧಣಿ ಜಾಗೀರ್ದಾರ್ ಸೇರಿದಂತೆ ಇನ್ನು ಅನೇಕ ಮುಖಂಡರು ಇನ್ನ ಇತರರು ಆಸ್ಪತ್ರೆಗೆ ದೌಡಾಯಿಸಿ ಬಂದು ಮಕ್ಕಳ ಆರೋಗ್ಯ ವಿಚಾರಿಸಿ ಸೂಕ್ತ ಚಿಕಿತ್ಸೆ ನೀಡುವಂತೆ ವೈದ್ಯರಿಗೆ ಶಫಿವುಲ್ಲಾ ಖಾನ ಸಲಹೆ ನೀಡಿದರು ಮುಂಜಾನೆ ಪಲಾವ್ ಮಾಡಿದ್ದು ಹುಳು ಬಿದ್ದಿದ್ದು ಎಂದು ಮಕ್ಕಳಲ್ಲಿ ವಿಚಾರಿಸಿದರು ಮಕ್ಕಳು ಆಹಾರ ತಿನ್ನಲಿಲ್ಲ ಬೇರೆ ಹಾರ ನೀಡಲಾಯಿತು ಅಷ್ಟರಲ್ಲಿ ಮಕ್ಕಳಿಗೆ ತಲೆನೋವು ಹೊಟ್ಟೆ ನೋವು ಕಾಣಿಸಿಕೊಂಡು ಕಾರಣ. ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಎಂದು



ವಸತಿ ನಿಲಯದ ವಾರ್ಡನ್ ಅಮರಗುಂಡಪ್ಪ ಪ್ರಿನ್ಸಿಪಲ್ ರಾಘವೇಂದ್ರ ರವರು ಪತ್ರಿಕೆಗೆ ತಿಳಿಸಿದರು ಮಕ್ಕಳನ್ನು ದಾಖಲು ಮಾಡಿಕೊಂಡು ಚಿಕಿತ್ಸೆ ನೀಡಲಾಗುತ್ತಿದೆ ಯಾವುದೇ ಅಪಾಯವಿಲ್ಲ ಮಕ್ಕಳಿಗೆ ಏನಾಗಿದೆ ಎನ್ನುವುದರ ಬಗ್ಗೆ ಪರೀಕ್ಷೆ ನಂತರ ಕಾರಣ ತಿಳಿದು ಬರಲಿದೆ ಎಂದು ತಾಯಿ ಮಕ್ಕಳ ಆಸ್ಪತ್ರೆಯ ಆಡಳಿತ ಅಧಿಕಾರಿ ಡಾ. ಕಾವೇರಿ ಪತ್ರಿಕೆಗೆ ಸ್ಪಷ್ಟನೆ ನೀಡಿದರು ವಸತಿಯ ನಿಲಯದಲ್ಲಿ 540 ಮಕ್ಕಳು ಅಭ್ಯಾಸ ಮಾಡುತ್ತಿದ್ದು ಈಗ 21 ಮಕ್ಕಳು ಅಸ್ತವ್ಯಸ್ತಗೊಂಡಿದ್ದಾರೆ ಅವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತಿದೆ ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾಕ್ಟರ್ ಅಯ್ಯನಗೌಡ ನೇತೃತ್ವದಲ್ಲಿ ವೈದ್ಯರು ವಸತಿ ನಿಲಯಕ್ಕೆ ಭೇಟಿ ಮಾಡಿ ಆಹಾರ ಗುಣಮಟ್ಟ ಪರೀಕ್ಷೆ ಮಾಡಿದರು.

ಸರ್ಕಾರ ದ ವಸತಿ ನಿಲಯಗಳಲ್ಲಿ ಬಡ ಮಕ್ಕಳು ಅಭ್ಯಾಸ ಮಾಡುತ್ತಿದ್ದು ಸರ್ಕಾರ ಗುಣಮಟ್ಟದ ಆಹಾರ ನೀಡದೆ ಕಳಪೆ ಆಹಾರ ನೀಡುತ್ತಿದ್ದಾರೆ ಅದೃಷ್ಟ ಯಾವ ಮಕ್ಕಳಿಗೆ ಅಪಾಯ ಇಲ್ಲ ಏನಾದರೂ ಹೆಚ್ಚು ಕಮ್ಮಿ ಆದ'ರೆ ಯಾರು ಹೊಣೆ ಮುಂದೆ ಈ ರೀತಿ ಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಕೆ.ಡಿ.ಪಿ. ಜಿಲ್ಲಾ ಸದಸ್ಯರಾದ ಶಫಿವುಲ್ಲಾ ಖಾನ್ ಮತ್ತು ಹರೂನ್ ಧಣಿ ಜಾಗೀರ್ದಾರ್ ರವರು ಪ್ರಿನ್ಸಿಪಾಲ್ ರಾಘವೇಂದ್ರಮತ್ತು ವಾಡನ. ಗುಂಡಪ್ಪ ಇಬ್ಬರನ್ನು ಮತ್ತು ಸಿಬ್ಬಂದಿ ವರ್ಗದವರನ್ನು ಅಡುಗೆ ಸಹಾಯಕರನ್ನು ತರಾಟೆಗೆ ತೆಗೆದುಕೊಂಡರು ಮುಂದೆ ಈ ರೀತಿ ಆಗದಂತೆ ಕಾಪಾಡಿಕೊಳ್ಳಬೇಕು ಎಂದು ಎಚ್ಚರಿಸಿದರು ಮಕ್ಕಳಿಗೆ ಆಸ್ಪತ್ರೆಗೆ ದಾಖಲಾದ ಮಾಹಿತಿ ತಿಳಿದು ಡಿ ವೈ ಎಸ್ಪಿ ಚಂದ್ರಶೇಖರ್ ಜಿ ನಾಯಕ್. ಗ್ರಾಮೀಣ .ಸಿ.ಪಿ.ಐ ವಿನಾಯಕ್ ನಗರ ಪೊಲೀಸ್.ಪಿ .ಐ. ವೀರರೆಡ್ಡಿ. ತಸಿಲ್ದಾರ್ ಅರುಣ್ ಕುಮಾರ್ ನಗರಸಭೆ ಕಮಿಷನರ್ ಪಾಂಡು ಇಟಗಿ ಬಳಗಾನೂರ ಪೊಲೀಸ್ ಠಾಣೆಯ ಪಿಎಸ್ಐ ಎರಿಯಪ್ಪ ಸೇರಿದಂತೆ ಇನ್ನಿತರರು ಪೊಲೀಸ ಅಧಿಕಾರಿಗಳು ಆಸ್ಪತ್ರೆಗೆ ಭೇಟಿ ನೀಡಿ ಘಟನೆ ಸಂಬಂಧ ಮಾಹಿತಿ ಪಡೆದುಕೊಂಡರು

## ಸಾಹಿತ್ಯ ಸಿಂಚನ

### ಸ್ಫೂರ್ತಿಯ ಚಿಲುಮೆ

ಸ್ಫೂರ್ತಿಯ ಚಿಲುಮೆ ಸದಾ ಹರಿಯಲಿ,
ಮನದೊಳಗೆ ಹೊಸ ಬೆಳಕು ಮೂಡಲಿ.
ಕನಸುಗಳಿಗೆ ಬಣ್ಣ ತುಂಬುವ ಶಕ್ತಿ,
ಜೀವನಕ್ಕೆ ನೀಡುವ ಅಮೂಲ್ಯ ಭಕ್ತಿ.

ಸೋಲು ಬಂದರೂ ಧೈರ್ಯ ಕಳೆದುಕೊಳ್ಳದಿರು,
ಗೆಲುವಿನ ದಾರಿಯತ್ತ ಹೆಜ್ಜೆ ಇಡು.
ಆತ್ಮವಿಶ್ವಾಸವೇ ನಮ್ಮ ಬಲವಾಗಲಿ,
ಪ್ರತಿ ಪ್ರಯತ್ನವೂ ಯಶಸ್ಸಾಗಲಿ.

ಪ್ರೀತಿ, ಕರುಣೆ ಹೃದಯ ತುಂಬಲಿ,
ಸೇವೆಯ ಸುಗಂಧ ಲೋಕವ್ಯಾಪಿಸಲಿ.
ಸತ್ಯದ ದೀಪ ಎಂದೂ ಆರದಿರಲಿ,
ನ್ಯಾಯದ ಹಾದಿ ಸದಾ ಬೆಳಗಲಿ.

ಶ್ರಮದ ಬೆವರೇ ಚಿನ್ನವಾಗಲಿ,
ಸಾಧನೆಯ ಹೂವು ಅರಳುತ್ತಿರಲಿ.
ಪ್ರತಿ ಬೆಳಗು ಹೊಸ ಪಾಠ ಕಲಿಸಲಿ,
ಪ್ರತಿ ಸಂಜೆ ಸಾಧನೆ ನೆನಪಿಸಲಿ.

ಸ್ಫೂರ್ತಿಯ ಚಿಲುಮೆ ಎಂದೂ ಒಣಗದಿರಲಿ,
ಆಶೆಯ ಗಿಡ ಸದಾ ಹಸಿರಾಗಿರಲಿ.
ಮಾನವೀಯ ಮೌಲ್ಯಗಳು ಬೆಳೆಯಲಿ,
ನಮ್ಮ ಬದುಕು ಲೋಕಕ್ಕೆ ಸ್ಫೂರ್ತಿಯಾಗಲಿ.

# ರೈಲು ಹಳಿ ಮೇಲೆ ಪಾದಚಾರಿ ಮೇಲ್ಸೇತುವೆ ನಿರ್ಮಾಣಕ್ಕೆ AIMIM ಮನವಿ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು:** ನಗರದ ರೈಲು ಹಳಿಯ ಎರಡೂ ಬದಿಗಳಲ್ಲಿ ಶಾಲಾ–ಕಾಲೇಜುಗಳು, ಸಾರ್ವಜನಿಕ ಪ್ರದೇಶಗಳು ಹಾಗೂ ಕ್ರೀಡಾಂಗಣಗಳಿರುವುದರಿಂದ ಪ್ರತಿದಿನ ನೂರಾರು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಜೀವದ ಹಂಗು ತೊರೆದು ರೈಲು ಹಳಿಯನ್ನು ದಾಟುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ತಕ್ಷಣವೇ ಪಾದಚಾರಿ ಮೇಲ್ಸೇತುವೆ (Foot Over Bridge) ನಿರ್ಮಿಸುವಂತೆ AIMIM (ಆಲ್ ಇಂಡಿಯಾ ಮಜ್ಲಿಸ್–ಎ–ಇತ್ತೇಹಾದುಲ್ ಮುಸ್ಲಿಮೀನ್) ಪಕ್ಷದ ರಾಯಚೂರು ನಗರ ಸಮಿತಿಯು ರೈಲ್ವೆ ಇಲಾಖೆಗೆ ಮನವಿ ಸಲ್ಲಿಸಿದೆ.

೦ಖಒಒಖಒ ರಾಯಚೂರು ನಗರ ಅಧ್ಯಕ್ಷ ಶಬ್ಬೀರ್ ಅಹ್ಮದ್ ಹೌದಡಿ ಅವರ ನೇತೃತ್ವದಲ್ಲಿ ರೈಲ್ವೆ ಇಲಾಖೆಯ ಸಹಾಯಕ ವಿಭಾಗೀಯ ಅಭಿಯಂತರರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ರೈಲುಗಳ ವೇಗ ? ಅಪಘಾತದ ಭೀತಿ ಈ ಮಾರ್ಗದಲ್ಲಿ ಸಂಚರಿಸುವ ರೈಲುಗಳ ವೇಗ ಗಂಟೆಗೆ ಸುಮಾರು 100 ರಿಂದ 120 ಕಿ.ಮೀ. ಇರುವುದರಿಂದ, ಮೇಲ್ಸೇತುವೆಯ ಕೊರತೆಯಿಂದ ಹಿರಿಯ ನಾಗರಿಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ನೇರವಾಗಿ ರೈಲು ಹಳಿಯನ್ನು ದಾಟಬೇಕಾದ ಅನಿವಾರ್ಯತೆ ಎದುರಾಗಿದೆ. ಇದರಿಂದ ಯಾವುದೇ ಕ್ಷಣದಲ್ಲಿ ಗಂಭೀರ ಅಪಘಾತ ಸಂಭವಿಸುವ ಸಾಧ್ಯತೆ ಇದೆ ಎಂದು ಮನವಿಯಲ್ಲಿ ಆತಂಕ ವ್ಯಕ್ತಪಡಿಸಲಾಗಿದೆ.



**ಹಳಿಯ ಸಮೀಪದಲ್ಲಿರುವ ಪ್ರಮುಖ ಸಂಸ್ಥೆಗಳು** – ಸರ್ಕಾರಿ ಪ್ರಥ–'ಮ ದರ್ಜೆ ಕಾಲೇಜು, ರಾಯಚೂರು
– ಜಿಲ್ಲಾ ಸ್ಕೌಟ್ ಹೌಸ್, ರಾಯಚೂರು
– ಶಾಹೀನ್ ಪಿಯು ಕಾಲೇಜು, ರಾಯಚೂರು
– ನವಚೇತನ ಪ್ರಾಥಮಿಕ ಮತ್ತು ಪ್ರೌಢಶಾಲೆ, ರಾಯಚೂರು
– ಹಸಮೀಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ರಾಯಚೂರು
– ಪಿಎಂ ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೆ.ಇ.ಬಿ. ಕಾಲೋನಿ, ರಾಯಚೂರು
– ಮಹಾತ್ಮಾ ಗಾಂಧಿ ಕ್ರೀಡಾಂಗಣ

ವಿದ್ಯಾರ್ಥಿಗಳ ಸುರಕ್ಷತೆ ಹಾಗೂ ಸಾರ್ವಜನಿಕರ ಸುಗಮ ಸಂಚಾರದ ಹಿತದೃಷ್ಟಿಯಿಂದ ರೈಲ್ವೆ ಇಲಾಖೆಯು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರದಲ್ಲೇ ಪಾದಚಾರಿ ಮೇಲ್ಸೇತುವೆ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ. ಈ ಸಂದರ್ಭದಲ್ಲಿ ೦ಖಒಖಒ ನಗರ ಕಾರ್ಯದರ್ಶಿ ಶಹಬಾಜ್ ಖಾನ್, ಜಂಟಿ ಕಾರ್ಯದರ್ಶಿಗಳಾದ ತನ್ವೀರ್ ಅಹ್ಮದ್ ಖಾನ್ ಹಾಗೂ ಸಂತೋಷ್ ಸೂರ್ಯವಂಶಿ, ಮಹಿಳಾ ವಿಭಾಗದ ಜಂಟಿ ಕಾರ್ಯದರ್ಶಿ ಪರ್ವೀನ್ ಸಲೀಮ್ ಶೇಖ್ ಮತ್ತು ಸೊಹೈಲ್ ಖುರೇಷಿ ಉಪಸ್ಥಿತರಿದ್ದರು. ಮನವಿಯ ಪ್ರತಿಯನ್ನು ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ್ ನಾಯಕ್ ಅವರಿಗೂ ರವಾನಿಸಲಾಗಿದೆ.

## ಪ್ರಾಥಮಿಕ ಶಿಕ್ಷಣ ಹಾಗೂ ಶಿಕ್ಷಕರ ಕಲ್ಯಾಣದ ಪ್ರಮುಖ ವಿಷಯಗಳ ಕುರಿತು ರಾಹುಲ್ ಗಾಂಧಿ ಅವರಿಗೆ ಮನವಿ

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಅಖಿಲ ಭಾರತ ಪ್ರಾಥಮಿಕ ಶಿಕ್ಷಕರ ಒಕ್ಕೂಟದ (AIPTF) ಅಧ್ಯಕ್ಷರಾದ ಶ್ರೀ ಬಸವರಾಜ್ ಗುರಿಕಾರ್ ಅವರ ನೇತೃತ್ವದ ನಿಯೋಗವು ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ಶ್ರೀ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ, ದೇಶದ ಪ್ರಾಥಮಿಕ ಶಿಕ್ಷಣ ಕ್ಷೇತ್ರ ಹಾಗೂ ಶಿಕ್ಷಕರ ಕಲ್ಯಾಣಕ್ಕೆ ಸಂಬಂಧಿಸಿದ ಹಲವು ಮಹತ್ವದ ವಿಷಯಗಳ ಕುರಿತು ಚರ್ಚಿಸಿತು.**

ಈ ಸಂದರ್ಭದಲ್ಲಿ ನಿಯೋಗವು ದೇಶದ ಪ್ರಾಥಮಿಕ ಶಿಕ್ಷಣದ ಪ್ರಸ್ತುತ ಸ್ಥಿತಿಗತಿಗಳು, ಶಿಕ್ಷಕರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳು, ಶಿಕ್ಷಕರ ಸೇವಾ ಭದ್ರತೆ ಹಾಗೂ



ಕಲ್ಯಾಣಕ್ಕೆ ಸಂಬಂಧಿಸಿದ ವಿಷಯಗಳು ಮತ್ತು ಶಿಕ್ಷಕರ ಅರ್ಹತಾ ಪರೀಕ್ಷೆ (TET) ಕುರಿತು ಇತ್ತೀಚೆಗೆ ನಡೆದಿರುವ ಬೆಳವಣಿಗೆಗಳನ್ನು ಶ್ರೀ ರಾಹುಲ್ ಗಾಂಧಿ ಅವರ ಗಮನಕ್ಕೆ ತಂದಿತು.

ಪ್ರಾಥಮಿಕ ಶಿಕ್ಷಣ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವುದು, ಶಿಕ್ಷಕರ ಹಿತಾಸಕ್ತಿಯನ್ನು ರಕ್ಷಿಸುವುದು, ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವುದು ಹಾಗೂ ಶಿಕ್ಷಕರ ಅರ್ಹತಾ ಪರೀಕ್ಷೆ (TET) ಸಂಬಂಧಿತ ಸಮಸ್ಯೆಗಳಿಗೆ ಸೂಕ್ತ ಮತ್ತು ನ್ಯಾಯಸಮ್ಮತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ನಿಯೋಗವು ಮನವಿ ಮಾಡಿತು.

ನಿಯೋಗದ ಮನವಿಗಳು ಹಾಗೂ ಅಭಿಪ್ರಾಯಗಳನ್ನು ತಾಳ್ಮೆಯಿಂದ ಆಲಿಸಿದ ಶ್ರೀ ರಾಹುಲ್ ಗಾಂಧಿ ಅವರು, ಪ್ರಾಥಮಿಕ ಶಿಕ್ಷಣ ಮತ್ತು ಶಿಕ್ಷಕರ ಕಲ್ಯಾಣಕ್ಕೆ ಸಂಬಂಧಿಸಿದ ನ್ಯಾಯಸಮ್ಮತ ಬೇಡಿಕೆಗಳಿಗೆ ಸಂಪೂರ್ಣ ಬೆಂಬಲ ನೀಡುವುದಾಗಿ ಭರವಸೆ ನೀಡಿದರು. ಶಿಕ್ಷಕರ ಸಮಸ್ಯೆಗಳು ಹಾಗೂ ಶಿಕ್ಷಣ ಕ್ಷೇತ್ರದ ಸವಾಲುಗಳ ಕುರಿತು ಸಂಬಂಧಿತ ವೇದಿಕೆಗಳಲ್ಲಿ ಚರ್ಚಿಸಿ, ಪರಿಹಾರ ಕಂಡುಕೊಳ್ಳಲು ಅಗತ್ಯ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಯಚೂರು ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಜಿ. ಕುಮಾರ್ ನಾಯಕ ಅವರು ಉಪಸ್ಥಿತ–ರಿದ್ದು, ನಿಯೋಗದ ಸದಸ್ಯರೊಂದಿಗೆ ಚರ್ಚೆಯಲ್ಲಿ ಭಾಗವಹಿಸಿದರು. ಅಖಿಲ ಭಾರತ ಪ್ರಾಥಮಿಕ ಶಿಕ್ಷಕರ ಒಕ್ಕೂಟದ ನಿಯೋಗವು ಪ್ರಾಥಮಿಕ ಶಿಕ್ಷಣದ ಅಭಿವೃದ್ಧಿ, ಶಿಕ್ಷಕರ ಹಕ್ಕುಗಳ ರಕ್ಷಣೆ ಹಾಗೂ ಶಿಕ್ಷಣ ಕ್ಷೇತ್ರದ ಸಮಸ್ಯೆಗಳ ಪರಿಹಾರಕ್ಕೆ ಸಂಬಂಧಿಸಿದಂತೆ ಸಲ್ಲಿಸಿದ ಮನವಿಗೆ ಶ್ರೀ ರಾಹುಲ್ ಗಾಂಧಿ ಅವರು ಸ್ಪಂದಿಸಿರುವುದು ಶಿಕ್ಷಕರ ಸಮುದಾಯದಲ್ಲಿ ಆಶಾಭಾವನೆ ಮೂಡಿಸಿದೆ.

### ಋತುಚಕ್ರ ಹೆಣ್ಣು ಮಕ್ಕಳ ಸಹಜ ಪ್ರಕ್ರಿಯೆ : ಲಕ್ಷ್ಮಿದೇವಿ

## ಹರಿಹರೆಯದವರ ಆರೋಗ್ಯ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಋತುಚಕ್ರ ಹೆಣ್ಣು ಮಕ್ಕಳ ಸಹಜ ಪ್ರಕ್ರಿಯೆಯಾಗಿದ್ದು ಸ್ವಚ್ಛತೆ ಕಾಪಾಡಿಕೊಳ್ಳುವಲ್ಲಿ ಜಾಗೃತಿವಹಿಸಬೇಕು ಆರೋಗ್ಯ ಇಲಾಖೆಯ ಜಿಲ್ಲಾ ಸಂಯೋಜಕಿ ಲಕ್ಷ್ಮಿ ದೇವಿ ಹೇಳಿದರು.**



ಇಲ್ಲಿನ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರ ಹಮ್ಮಿಕೊಂಡ ಪಿರಿಯಡ್ ಕಾರ್ಯಕ್ರಮದಲ್ಲಿ ಋತುಚಕ್ರದ ಸಮಸ್ಯೆಗಳನ್ನು ಮುಕ್ತವಾಗಿ ಪೋಷಕರಲ್ಲಿ ಹಂಚಿಕೊಳ್ಳುವುದು ಸೂಕ್ತ ಪೌಷ್ಟಿಕ ಆಹಾರ ಸೇವಿಸುವುದರಿಂದ ಆರೋಗ್ಯ ಸಮಸ್ಯೆಗಳಿಂದ ವಿಮುಖರಾಗಬಹುದು ಎಂದರು. ಬಾಲಕಿಂ–ಯರಲ್ಲಾಗುವ ಪ್ರೌಢಾವಸ್ಥೆಯ ದೈಹಿಕ, ಭಾವನಾತ್ಮಕ ಬದಲಾವಣೆ, ಋತುಚಕ್ರದ ನೋವು, ನೈರ್ಮಲ್ಯ, ಮುಂಜಾಗ್ರತಾ ಕ್ರಮ, ಸುರಕ್ಷತೆಯ ಸೂಕ್ತ ಸಲಹೆ ಕುರಿತು ಮಾಹಿತಿ ನೀಡಲಾಯಿತು. ಹಲೋ ಮೈತ್ರಿ ಸಹಾಯವಾಣಿ, ಸ್ನೇಹ ಕ್ಲಿನಿಕ್ ಉಪಯೋಗ, ಅಪ್ರಾಪ್ತ ಗರ್ಭಿಣಿ, ಎಚ್ ಪಿವಿ ಲಸಿಕೆ ಕುರಿತು ಮಾಹಿತಿ ನೀಡಲಾಯಿತು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಕೆ.ಶೋಭಾ. ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಿ.ಮಲ್ಲಿಕಾರ್ಜುನ, ಪ್ರಾಚಾರ್ಯ ಎನ್.ಮರೆಪ್ಪ, ಆಶಾ ಕಾರ್ಯಕರ್ತೆ ಶಾರದಾ. ಎಚ್ಐಒ ದೇವರಾಜ್, ಗಣೇಶ್ ಮತ್ತಿತರರು ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಆನಂದಾಶ್ರಮದಲ್ಲಿ ಶ್ರದ್ಧಾ ಭಕ್ತಿಯ ಗುರುಪೂರ್ಣಿಮೆ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಪಟ್ಟಣದ ಶ್ರೀಮನ್ನಿಜಗುಣ ಶಿವಯೋಗಿಗಳ ಆನಂದಾಶ್ರಮದಲ್ಲಿ ಗುರು ಪೂರ್ಣಿಮೆ ಆಚರಣೆಯನ್ನು ಬುಧವಾರ ಬೆಳಿಗ್ಗೆ ಆಯೋಜಿಸಲಾಗಿತ್ತು. ಬೆಳಿಗ್ಗೆ ಶ್ರೀಮನ್ನಿಜಗುಣ ಶಿವಯೋಗಿಗಳ ಪಾದಗಳಿಗೆ ರುದ್ರಾಭಿಷೇಕವನ್ನು ವೇದಮೂರ್ತಿ ಘನಮಠೇಶ ಬೇನಾಳಮಠ ನೆರವೇರಿಸಿದರು.**

ನಡೆಯಿತು. ಬೆಳಿಗ್ಗೆ 9.00 ಗಂಟೆಗೆ ಆಶ್ರಮದಲ್ಲಿ ಗುರುಪಾದಪೂಜೆ ಕಾರ್ಯಕ್ರಮದಲ್ಲಿ ಕೋರವಾರದ ಮುರಿಗೆಂದ್ರಸ್ವಾಮೀ–ಜಿಗಳ ಪಾದಪೂಜೆ ಮಾಡಲಾಯಿತು. ಮುಖ್ಯ ಅತಿಥಿಗಳಾಗಿದ್ದ ಎಚ್.ಎಸ್.ಪಾಟೀಲ ಕಾಲೇಜಿನ ಉಪನ್ಯಾಸಕ ಪರಶುರಾಮ ಚೌಡಕೇರ



ಮಾತನಾಡಿ, ವ್ಯಾಸ ಪೌರ್ಣಿಮೆಯನ್ನು ಗುರುಪೂರ್ಣಿಮೆ ಎನ್ನಲಾಗುತ್ತದೆ. ವ್ಯಾಸರನ್ನು ಮನುಷ್ಯರಿಗೆ ಅಧ್ಯಾತ್ಮದ ಜ್ಞಾನ ನೀಡಿದ ಆದಿಗುರುವೆಂದು ಪರಿಗಣಿಸಲಾಗಿದೆ. ಅವರ ಸ್ಮರಣೆಯ ಪವಿತ್ರದಿನವಿದಾಗಿದೆ ಎಂದರು.

ಜ್ಞಾನದ ಬೆಳಕನ್ನು ನೀಡುವ ಶಕ್ತಿ ಹೊಂದಿರುವವರೆಲ್ಲ ಗುರುಗಳೆ, ಅವರ ಸ್ಮರಣೆಯ ಮೂಲಕ ಅವರಿಗೆ ಗೌರವ ಸಲ್ಲಿಸಬೇಕು. ಹುಬ್ಬಳ್ಳಿಯ ಸಿದ್ಧಾರೂಢರು, ಸಜ್ಜಲಗುಡ್ಡದ ಶರಣಮ್ಮನವರು, ತಾಳಿಕೋಟೆ ಖಾಸ್ಗತರಂತವರೆಲ್ಲ ಗುರುವಿನ ಸ್ಥಾನದಲ್ಲಿದ್ದು ಅಂತಹ ಶರಣರು ಸಂತರನ್ನು ಮನದೊಳಗೆ ನಿತ್ಯ ಸ್ಮರಣೆ ಮಾಡುವುದರಿಂದ ಮಾನವ ಜನ್ಮ ಸಾರ್ಥಕತೆ ಪಡೆಯುತ್ತದೆ ಎಂದರು. ವಿವಿಧ ತತ್ವಪದಗಳನ್ನು ಹಾಡುತ್ತ ಪ್ರವಚನ ಮಾಡಿದರು.

ಸಾನ್ನಿಧ್ಯವನ್ನು ವಹಿಸಿದ್ದ ಖಾಸ್ಗತೇಶ್ವರಮಠದ ಆಡಳಿತಾಧಿಕಾರಿ ಮುರುಗೇಶ ವಿರಕ್ತಮಠ ,. ಅಧ್ಯಕ್ಷತೆ ವಹಿಸಿದ್ದ ಶ್ರೀಮನ್ನಿಜಗುಣ ಶಿವಯೋಗಿಗಳ ಆನಂದಾಶ್ರಮದ ಅಧ್ಯಕ್ಷ ವೇ.ಮೂ.ಎಸ್.ಎಂ.ಬೇನಾಳಮಠ ಮಾತನಾಡಿದರು. ವಿಜಯಾ ಲೊಕರೆ ಪ್ರಾರ್ಥನೆ, ಉಮಾ ಘಿವಾರಿ ಸ್ವಾಗತಿಸಿದರು. ಕಾರ್ಯದರ್ಶಿ ಮಲ್ಲಿಕಾರ್ಜುನ ಹಿಪ್ಪರಗಿ ನಿರ್ವಹಿಸಿದರು. ಪಟ್ಟಣ ಸೇರಿದಂತೆ ತಮದಡ್ಡಿ, ಮೈಲೇಶ್ವರ, ಮಿಣಜಗಿ ಬಳಗಾನೂರ ಮೊದಲಾದ ಗ್ರಾಮಗಳಿಂದ ಭಕ್ತಾದಿಗಳು ಪಾಲ್ಗೊಂಡಿದ್ದರು.

## ರೆಸ್ಟೋರೆಂಟ್ ಬಂದ್ ಮಾಡಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಬಾರ್ ಅಂಡ್ ರೆಸ್ಟೋರೆಂಟ್ ವಿರುದ್ಧ ಕ್ರಮಕ್ಕೆ ಕರವೇ ಒತ್ತಾಯ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಪಟ್ಟಣದ ಎಸ್ಎಲ್ವಿ ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ಮೇಘ ಬಾರ್ ಅಂಡ್ ರೆಸ್ಟೋರೆಂಟ್ ಸೇರಿ ವಿವಿಧ ಬಾರ್ ಮತ್ತು ರೆಸ್ಟೋರೆಂಟ್ಗಳಲ್ಲಿ ಸರ್ಕಾರ ನಿಗದಿಪಡಿಸಿರುವ ನಿಯಮಗಳನ್ನು ಉಲ್ಲಂಘಿಸಿ ರೆಸ್ಟೋರೆಂಟ್ ವಿಭಾಗವನ್ನು ಉದ್ದೇಶಪೂರ್ವಕವಾಗಿ ಬಂದ್ ಮಾಡಿ, ಕೇವಲ ಮದ್ಯ ಮಾರಾಟವನ್ನೇ ನಡೆಸುತ್ತಿರುವುದು ಸಾರ್ವಜನಿಕರ ಗಮನಕ್ಕೆ ಬಂದಿದೆ ಎಂದು ಆರೋಪಿಸಿ ಕರವೇ ಪ್ರವೀಣ್ ಶೆಟ್ಟಿ ಬಣದ ತಾಲೂಕ ಅಧ್ಯಕ್ಷ ಆಂಜನೇಯ ಭಂಡಾರಿ ಅಬಕಾರಿ ಇನ್ಸ್ಪೆಕ್ಟರ್ ಲಕ್ಷ್ಮೀದೇವಿ ಇವರಿಗೆ ಮನವಿಯನ್ನು ಸಲ್ಲಿಸಿದರು.**

ಅನೇಕ ಕಡೆಗಳಲ್ಲಿ ಆಹಾರ ಸೇವೆ ನೀಡದೆ, ಕೇವಲ ಮದ್ಯವನ್ನು ಮಾತ್ರ ಪೂರೈಸಲಾಗುತ್ತಿದ್ದು, ಪರವಾನಗಿ ಷರತ್ತುಗಳನ್ನು ಉಲ್ಲಂಘಿಸಲಾಗುತ್ತಿದೆ. ಇದಲ್ಲದೆ ಕೆಲವು




ಬಾರ್ಗಳಲ್ಲಿ ನಿಗದಿತ ಸಮಯದ ನಂತರವೂ ಅಕ್ರಮವಾಗಿ ಮದ್ಯ ಮಾರಾಟ ನಡೆಸಲಾಗುತ್ತಿದೆ. ಅಲ್ಲದೇ ಮನೆಗಳಲ್ಲಿ ಕೆಲವು ಡಬ್ಬಾ ಅಂಗಡಿಗಳ ಹಾಗೂ ಕಿರಾಣಿ ಅಂಗಡಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದ್ದು ಯಾವುದೇ ಪರವಾನಗಿ ಇಲ್ಲದೆ ಮನೆಗಳು, ಅಂಗಡಿಗಳು ಹಾಗೂ ಇತರೆ ಸ್ಥಳಗಳಲ್ಲಿ ಅಕ್ರಮವಾಗಿ ಮದ್ಯವನ್ನು ಸಂಗ್ರಹಿಸಿ ಮಾರಾಟ ಮಾಡುತ್ತಿದ್ದು, ಇದರಿಂದ ಕಾನೂನು ಸುವ್ಯವಸ್ಥೆಗೆ ಧಕ್ಕೆ ಉಂಟಾಗುತ್ತಿದೆ.

ಅಕ್ರಮ ಮದ್ಯ ಮಾರಾಟದಿಂದ ಯುವಜನರು ವ್ಯಸನಕ್ಕೆ ಒಳಗಾಗುತ್ತಿದ್ದಾರೆ. ಮಹಿಳೆಯರು ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕುಡಿದ ಮತ್ತಿನಲ್ಲಿ ಗಲಾಟೆ, ಹಲ್ಲೆ, ರಸ್ತೆ ಅಪಘಾತಗಳು ಹಾಗೂ ಇತರೆ ಸಮಾಜ ವಿರೋಧಿ ಚಟುವಟಿಕೆಗಳು ಹೆಚ್ಚಾಗುತ್ತಿವೆ. ಇದ–ರಿಂದ ಸಾರ್ವಜನಿಕರ ನೆಮ್ಮದಿ ಹಾಳಾಗುತ್ತಿದೆ. ಕೂಡಲೇ ಬಾರ್ ಮತ್ತು ರೆಸ್ಟೋರೆಂಟ್ಗಳಲ್ಲಿ ಕೇವಲ ಮದ್ಯ ಮಾರಾಟ ಮಾಡುವವರ ವಿರುದ್ಧ ಸೂಕ್ತ 'ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಅಕ್ರಮ ಮದ್ಯ ಮಾರಾಟವನ್ನು ತಡೆಹಿಡಿಯಬೇಕೆಂದು ತಾಲೂಕಿನ ಎಲ್ಲಾ ಬಾರ್ ಮತ್ತು ರೆಸ್ಟೋರೆಂಟ್ಗಳ ಮೇಲೆ ವಿಶೇಷ ಜಂಟಿ ದಾಳಿ ನಡೆಸಿ ಪರಿಶೀಲನೆ ಮಾಡಬೇಕು.

ನಿಯಮ ಬಾಹಿರವಾಗಿ ರೆಸ್ಟೋರೆಂಟ್ ಬಂದ್ ಮಾಡಿ ಕೇವಲ ಮದ್ಯ ಮಾರಾಟ ಮಾಡುತ್ತಿರುವ ಸಂಸ್ಥೆಗಳ ವಿರುದ್ಧ ಕ್ರಮ ಜರುಗಿಸಿ, ಅಗತ್ಯವಿದ್ದಲ್ಲಿ ಪರವಾನಗಿಯನ್ನು ಅಮಾನತುಗೊಳಿಸಬೇಕು ಅಥವಾ ರದ್ದುಪಡಿಸಬೇಕು. ನಿಗದಿತ ಸಮಯ ಮೀರಿ ಮದ್ಯ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಮದ್ಯ ಮಾರಾಟ ಮಾಡುವ ದಾಳಿನಡೆಸಿ ಅಕ್ರಮ ಮದ್ಯ ವಶಪಡಿಸಿಕೊಂಡು ಮಾರಾಟಗಾರರ ವಿರುದ್ದ ಶುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು.

ಈ ವಿಷಯವನ್ನು ಗಂಭಿರವಾಗಿ ಪರಿಗಣಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ತಮ್ಮ ಕಾರ್ಯಾಲಯದ ಮುಂದೆ ಧರಣಿಯನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಒತ್ತಾಯಿಸಿದರು . ಈ ಸಂದರ್ಭದಲ್ಲಿ ಅಮರೇಶ್ ಹೊಸಮನಿ , ವೆಂಕಟೇಶ್ ಉಪ್ಪಾರ , ಅಭಿಷೇಕ್ ನಾಯಕ್ , ತಿಮ್ಮೇಶ್ ನಾಯಕ್ ,ಯಲ್ಲಪ್ಪ ದೊಡ್ಡಮನಿ , ಗಿರಿ , ಶ್ರೀಕಾಂತ್ ನಾಯಕ್ , ಪ್ರಕಾಶ , ಮೌನೇಶ್ , ಧರ್ಮಣ್ಣ ಸೇರಿದಂತೆ ಇತರರು ಇದ್ದರು .

## ರೋಗಿಗಳ ಜೀವದ ಜೊತೆ ಚಲ್ಲಾಟ ವಾಡುವ ಡಾ. ಮುರುಗೇಂದ್ರ ಸ್ವಾಮಿ ಮಜ್ಜಿ ಆಲೋಪಥಿಕ್ ವೈದ್ಯ ಪ್ರಮಾಣ ಪಾತ್ರವನ್ನು ತಡೆಹಿಡಿಯುವಂತೆ ಕನ್ನಡ ಸೇನೆ ಕರ್ನಾಟಕ ಒತ್ತಾಯ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಆಮದಿಹಾಳ ಗ್ರಾಮದಲ್ಲಿ ಡಾ॥ ಮುರಗೇಂದ್ರಸ್ವಾಮಿ ಮಜ್ಜಿ ಇವರು ಃ೦ಒಖ ಅಲೋಪಥಿಕ್ ವೈದ್ಯರ ವಿದ್ಯಾರ್ಹತೆ ಹೊಂದಿ ರೋಗಿಗಳಿಗೆ ಮೊಣಕಾಲು ನೋವು ಕಡಿಮೆ ಮಾಡುತ್ತೇನೆಂದು ಕರೆಂಟ್ ಶಾಖ್ ಮತ್ತು ಇಂಜೆಕ್ಷನ್ ಮಾಡುವದು ಥೈರಾಡ್ ಮಾತ್ರೆಗಳನ್ನು ಕೊಡುವುದು**

ಈ ರೀತಿಯಾಗಿ ತನ್ನ ಅರ್ಹತೆಯ ವ್ಯಾಪ್ತಿಗೆ ಒಳಪಡದೇ ಇರುವ ಔಷಧಿಗಳನ್ನು ಅಮಾಯಕ ರೋಗಿಗಳಿಗೆ ನೀಡಿ ತನ್ನಮನಬಂದಂತೆ ಖಾಸಗಿ ವ್ಯಕ್ತಿಗಳಿಂದ ಕಿತ್ತಿಕೊಳ್ಳುತ್ತಿದ್ದು ಇವರಿಗೆ ನೀಡಿದ ವೈದ್ಯಕೀಯ ಪ್ರಮಾಣ ಪತ್ರವನ್ನು ತಡೆಹಿಡಿದು ತಪ್ಪಿತಸ್ಥರ ಮೇಲೆ ಕಾನೂನಿನ ಕಠಿಣ ಕ್ರಮ ಜರುಗಿಸುವಂತೆ ಕನ್ನಡ ಸೇನೆ ಕರ್ನಾಟಕ ತಾಲೂಕ ಅಧ್ಯಕ್ಷ ಶಿವು ಕೆಂಪು ಸಹಾಯಕ ಆಯುಕ್ತರ ಮೂಲಕ ಜಿಲ್ಲಾ ವೈದ್ಯಾಧಿಕಾರಿ (DHO) ಗಳಿಗೆ ಮನವಿಯನ್ನು ಸಲ್ಲಿಸಿದರು.




ತಾಲೂಕಿನ ಆಮದಿಹಾಳ ಗ್ರಾಮದಲ್ಲಿ ಡಾ॥ ಮುರಗೇಂದ್ರಸ್ವಾಮಿ ಮಜ್ಜಿ ಇವರು ಃ೦ಒಖ ಅಲೋಪಥಿಕ್ ವಿದ್ಯಾರ್ಹತೆಯನ್ನು ಹೊಂದಿರುತ್ತಾರೆ. ಆದರೆ ಇವರಿಗೆ ಇಂಗ್ಲೀಷ ಮೆಡಿಷನ್ ಕೊಡುವ ಅಧಿಕಾರವಿಲ್ಲ , ದೇಹದ ಬಾಡಿ ಮೊಣಕಾಲಿನ ನೋವಿಗೆ ವಿದ್ಯುತ್ ಶಾಖ್ ನೀಡಿರುವರು ಇದ–ರಿಂದ ಟ್ರೇಟಮೆಂಟ ಪಡೆದುಕೊಂಡವರು ಎರಡು ಕಾಲುಗಳನ್ನು ಕಳೆದುಕೊಂಡು ಮುಂದೆ ನಡೆದಾಡಲು ಬಾರದಂತೆ ಎರಡು ಕಾಲುಗಳ ನಿಲ್ಲಲು ಬಾರದಂತೆ ಸುಮಾರು 7ಜನರು ಸಂಪೂರ್ಣವಾಗಿ ಕಾಲು ಕಳೆದುಕೊಂಡಿರುತ್ತಾರೆ , ಕೆಲವು ರೋಗಿಗಳಿಗೆ ಥೈರಾಡ ಮಾತ್ರೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ನೀಡಿದ್ದರಿಂದ ಆ ರೋಗಿಗಳ ಆರೋಗ್ಯ ಹದಗೆಟ್ಟಿರುತ್ತವೆ. ಪ್ರತಿ ರೋಗಿಯಿಂದ 1500ರಿಂದ 2000ರೂಪಾಯಿಗಳನ್ನು ನಿಗದಿಪಡಿಸಿರುತ್ತಾರೆ.

ಇವರು ತಮ್ಮ ದವಾಖಾನೆಗೆ ಯಾವುದೇ ನಾಮ ಫಲಕ ಹಾಕಿರುವುದಿಲ್ಲ . ತಾವೇ ಸ್ವಂತ ಔಷಧಿ ಅಂಗಡಿಯನ್ನು ಇಟ್ಟಿದ್ದು, ಮಾತ್ರೆಗಳನ್ನು ಮತ್ತು ಔಷಧಿ ಖರೀದಿಸಲು ಇದೇ ಔಷಧಿ ಅಂಗಡಿಯಿಂದ ಖರೀದಿಸುವಂತೆ ರೋಗಿಗಳಿಗೆ ಸಲಹೆ ನೀಡುತ್ತಾನೆ . ವೈದ್ಯಕೀಯ ಮಂಡಳಿಯ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘನೆ ಮಾಡಿ ತಮಗೆ ಮನಬಂದಂತೆ ತಾನು ಹೊಂದಿದ ವೈದ್ಯಕೀಯ ವಿದ್ಯಾರ್ಹತೆ ಹೊರತುಪಡಿಸಿ ಸಾರ್ವಜನಿಕ ರೋಗಿಗಳಿಗೆ ಇರುವ ಕಾಯಿಲೆಗೆ ಸಂಬಂಧಪಟ್ಟ ವೈಧ್ಯರ ಬಳಿ ಕಳುಹಿಸುವ ಸೂಚನೆ ಮಾಡಬೇಕಾದ ಈ ವೈಧ್ಯರು ತಾನು ಅಲೋಪಥಿಕ್ ವೈದ್ಯ ಎನ್ನುವದನ್ನು ಮರೆತು ವೈದ್ಯಕೀಯ ಮಂಡಳಿಯ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘನೆ ಮಾಡಿ ರೋಗಿಗಳ ಜೀವದ ಜೊತೆ ಚೆಲ್ಲಾಟಕ್ಕೆ ಮುಂದಾಗಿರುತ್ತಾರೆ.

ರೋಗಿಗಳು ತಮಗೆ ಅನ್ಯಾಯವಾಗಿ ಕಾಲು ಕಳೆದುಕೊಳ್ಳುವಂತೆ ಮಾಡಿದ ಡಾ॥ಮುರುಗೇಂದ್ರಸ್ವಾಮಿ ಇವರ ಮೇಲೆ ವೈಧ್ಯಕೀಯ ಕಾನೂನಿನ ಅಡಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು. ತಪ್ಪಿತಸ್ಥ ಃ೦ಒಖ ವೈಧ್ಯರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಯಿಸಿದರು. ಒಂದು ವೇಳೆ ತಮ್ಮಿಂದ ಯಾವುದೇ ಕ್ರಮಕ್ಕೆ ಮುಂದಾಗದೇ ಇದ್ದಲ್ಲಿ ವೈದ್ಯಕೀಯ ಇಲಾಖೆಯ ಹಿರಿಯ ಅಧಿಕಾರಿಳಿಗೆ ಹಾಗೂ ಸರಕಾರದ ಗಮನಕ್ಕೆ ತಂದು ಹೋರಾಟವನ್ನು ಸದರಿ ಆಮದಿಹಾಳ ಗ್ರಾಮದ ಸುತ್ತಮುತ್ತಲಿನ ಗ್ರಾಮಸ್ತರೊಂದಿಗೆ ನಮ್ಮ ಸಂಘಟನೆಯು ಹೋರಾಟವನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದರು . ಈ ಸಂದರ್ಭದಲ್ಲಿ ಶರೋಣಿ ಪವಾರ್ ಜಿಲ್ಲಾ ಉಪಾಧ್ಯಕ್ಷರು , ಯಮನೂರಪ್ಪ ಬಿ. ನಗರ ಘಟಕ ಅಧ್ಯಕ್ಷರು , ಶಿವಪ್ಪ ಅಂಕನಾಳ ಹೋಬಳಿ ಅಧ್ಯಕ್ಷರು ಮುದಗಲ್ ಸೇರಿದಂತೆ ಇತರರು ಇದ್ದರು .

## ನೇಮಕಾತಿ ಪ್ರಕಟಣೆ

**ರಾಮನಗರ ಜಿಲ್ಲಾ ನ್ಯಾಯಾಲಯ ನೇಮಕಾತಿ 2026 ? 55 ಬೆರಳಚ್ಚುಗಾರ (Typist) ಮತ್ತು ಸೇವಕ (Servant) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ 30 ಜುಲೈ 2026**

ರಾಮನಗರ ಜಿಲ್ಲಾ ನ್ಯಾಯಾಲಯ ನೇಮಕಾತಿ 2026: 55 ಬೆರಳಚ್ಚುಗಾರ ಮತ್ತು ಸೇವಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ರಾಮನಗರ ಜಿಲ್ಲಾ ನ್ಯಾಯಾಲಯವು ಜುಲೈ 2026ರ ಅಧಿಕೃತ ಅಧಿಸೂಚನೆಯ ಮೂಲಕ ಬೆರಳಚ್ಚುಗಾರ ಮತ್ತು ಸೇವಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದ ಅಡಿಯಲ್ಲಿ ರಾಮನಗರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 31-ಆಗಸ್ಟ್-2026 ರೊಳಗೆ ಅಥವಾ ಅಂದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: ramanagara.dcourts.gov.in

# 'ಧ್ರುವ ನಕ್ಷತ್ರ' ಚಲನಚಿತ್ರದ ಚಿತ್ರೀಕರಣ ಮುಕ್ತಾಯ

**ನೈಜ್ಯ ದೆಸೆ ನ್ಯೂಸ್**

ಹನೂರು: ಬಿ.ವಿ.ಕಂಬೈನ್ಸ್ ಬ್ಯಾನರ್‌ನಲ್ಲಿ ನಿರ್ಮಾಣವಾಗುತ್ತಿರುವ ಬಹುನಿರೀಕ್ಷಿತ ಕನ್ನಡ ಚಿತ್ರ 'ಧ್ರುವ ನಕ್ಷತ್ರ'ದ ಚಿತ್ರೀಕರಣ ಯಶಸ್ವಿಯಾಗಿ ಸಂಪೂರ್ಣಗೊಂಡಿದೆ. ಚಿತ್ರೀಕರಣ ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಹನೂರು ಪಟ್ಟಣದ ಮಹದೇಶ್ವರ ಕ್ರೀಡಾಂಗಣದಲ್ಲಿ ಚಿತ್ರತಂಡ ಸಂಪ್ರದಾಯದಂತೆ ಕುಂಬಳಕಾಯಿ ಒಡೆಯುವ ಮೂಲಕ ಸಂಭ್ರಮಿಸಿತು.

ನಿಗದಿತ 50 ದಿನಗಳ ಕಾಲ ನಡೆದ ಚಿತ್ರೀಕರಣವು ಮೈಸೂರು, ಮದ್ದೂರು, ಹೊಸಕೋಟೆ, ಹನೂರು ಹಾಗೂ ಒಡೆಯರಾಪಾಳ್ಯ ಸುತ್ತಮುತ್ತ ಸತತ ಚಿತ್ರೀಕರಣ ನಡೆಸಲಾಯಿತು. ವಿಶೇಷವೆಂದರೆ ಈ ಚಿತ್ರೀಕರಣದಲ್ಲಿ ಸ್ಥಳೀಯ ಪ್ರತಿಭೆಗಳು ಕೂಡ ಭಾಗಿಯಾಗಿ ತಮ್ಮ ಕಲೆಯನ್ನು ಪ್ರದರ್ಶಿಸಿದ್ದಾರೆ.ಈ ಸಂದರ್ಭದಲ್ಲಿ ಮಾತನಾಡಿದ ಕಥೆ-ಚಿತ್ರಕಥೆ- ಸಂಭಾಷಣೆ ಬರೆದು ನಿರ್ದೇಶನ



ಮಾಡಿರುವ ಬಿ. ಕೃಷ್ಣ ಮಳವಳ್ಳಿ ಅವರು ನಮ್ಮ ಚಿತ್ರ ಹಳ್ಳಿ ಸೊಗಡಿನ ಪ್ರೇಮಕಥೆಯಾಗಿದೆ. ಮನೆ ಮಂದಿಯೆಲ್ಲ ಕುಟುಂಬ ಸಹಿತ ನೋಡಬಹುದಾದ ಚಿತ್ರ ಇದಾಗಿದೆ. ಚಿತ್ರೀಕರಣ ಸಂಪೂರ್ಣ ಮುಗಿದಿದ್ದು ಈಗ ಡಬ್ಬಿಂಗ್ ಕಾರ್ಯ ಮುಗಿಸಿ ಆದಷ್ಟು ಬೇಗ ಚಿತ್ರವನ್ನು ಪ್ರೇಕ್ಷಕರ ಮುಂದೆ ತರುವ ಉದ್ದೇಶವಿದೆ.

ಕನ್ನಡ ಸಿನಿ ಪ್ರೇಕ್ಷಕರು ಕನ್ನಡ ಚಿತ್ರಗಳನ್ನು ಚಿತ್ರಮಂದಿರದಲ್ಲಿ ನೋಡಿ ಪ್ರೋತ್ಸಾಹಿಸಬೇಕು ಎಂದರು.

ತಾರಾಗಣದಲ್ಲಿ ನಾಯಕ ನಟ ಮನ್ವಿತ್, ನಾಯಕಿ ಮೇಘನಾ ಎಸ್, ಗಣೇಶ್, ಪಲ್ಲವಿ, ಚಂದ್ರಪ್ರಭ, ಸಿಲ್ಲಿಲಲ್ಲಿ ಆನಂದ್, ಹಳ್ಳಿ ಮೇಷ್ಟ್ರು ಖ್ಯಾತಿಯ ಕಪ್ಪೆರಾಯ, ಸೈಲೆಸ್ ವೆಂಕಟ್, ಪಂಚಮುಖಿ ಚಂದ್ರು, ಚೆನ್ನಬಸಪ್ಪ , ಮಾಣಿಕ್ಯ ರಾಜ್, ಎಂ ಮಾದೇಶ್ ಭೈರನತ್ತ , ಜಿಲ್ಲಾ ಪತ್ರಬರಹಗಾರರಾದ ಎಸ್ ಪುಟ್ಟಸ್ವಾಮಿ, ಹನೂರು ಎಂ ಸತ್ಯಸುಂದರ್, ಎಲ್ಲಿಮಾಳ ಭುವನೇಶ್, ಜೂನಿಯರ್ ಜಗ್ಗೇಶ್ ನಾಗಿ ಬೈರನತ್ತ ಎಂ, ಆಕಾಶ್ ಸ್ವಾಮಿ , ಕೆ ಸಿ ಸಿಂಗ್ ,ಸ್ಯಾಮ್, ಅಶ್ವಿನಿ ,ನಿವೇದಿತಾ, ಪ್ರಿಯ, ಸತ್ಯ ಸುಂದರ್, ಬೇಬಿ ದವನಿ, ಮಾಸ್ಟರ್ ಅಶ್ವಥ್, ಸಾಯಿ ರಾಮ್ ಮುಂತಾದ ಕಲಾವಿದರು ಅಭಿನಯಿಸಿದ್ದಾರೆ.


ತಾಂತ್ರಿಕವರ್ಗದಲ್ಲಿ ಛಾಯಾಗ್ರಹಣ ರವಿ ಸುವರ್ಣ, ಸತ್ಯಸುಂದರ್, ಕೃಷ್ಣಕುಮಾರ್ , ಸಂಕಲನ ಅರವಿಂದ ರಾಜ್ ,ಸಂಗೀತ ಆರ್.ಎಸ್. ಗಣೇಶ್ ನಾರಾಯಣ್, ಸಾಹಸ ಡ್ರ?ಯಾಗನ್ ಅಭಿ, ಮೇಕಪ್ ಈಶ್ವರ್, ಪತ್ರಿಕಾಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ಸಹ ನಿರ್ದೇಶನ ಎಂ ನಾಸಿರ್ ಅವರದಿದೆ. ಸದ್ಯದಲ್ಲಿಯೇ ಡಬ್ಬಿಂಗ ಕಾರ್ಯ ಕೈಗೊಂಡು ಶೀಘ್ರವೇ ಚಿತ್ರವನ್ನು ತೆರೆಗೆ ತರುವ ಆಲೋಚನೆ ನಿರ್ಮಾಪಕರದ್ದಾಗಿದೆ.

-ಡಾ.ಪ್ರಭು ಗಂಜಿಹಾಳ

## ವಿಧಾನಪರಿಷತ್ ಸದಸ್ಯ ರವಿಕುಮಾರಗೆ ಗೌರವ ಸಮರ್ಪಣೆ

**ನೈಜ್ಯ ದೆಸೆ ನ್ಯೂಸ್**

ತಾಳಿಕೋಟಿ: ವಿಧಾನ ಪರಿಷತ್ ಸದಸ್ಯ, ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಎನ್ ರವಿಕುಮಾರ ಇವರನ್ನು ನಗರ ಬಿಜೆಪಿ ಘಟಕದ ವತಿಯಿಂದ ಸನ್ಮಾನಿಸಲಾಯಿತು. ಗುರುವಾರ ತಾಲೂಕಿನ ಮಿಣಜಗಿ ಗ್ರಾಮಕ್ಕೆ ಬರವೀಕ್ಷಣೆ ಹಾಗೂ ರೈತರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸಿದ ಸಂದರ್ಭದಲ್ಲಿ ಅವರನ್ನು ಪಟ್ಟಣದ ಶ್ರೀ ಬಸವೇಶ್ವರ ವೃತ್ತದಲ್ಲಿ ಪಕ್ಷದ ವತಿಯಿಂದ



ಅದ್ದೂರಿಯಾಗಿ ಸ್ವಾಗತಿಸಿ ಗೌರವ ಸಮರ್ಪಣೆ ಸಲ್ಲಿಸಲಾಯಿತು.

ಈ ಸಮಯದಲ್ಲಿ ಬಿಜೆಪಿ ರಾಜ್ಯ ರೈತ ಮೋರ್ಚಾ ಅಧ್ಯಕ್ಷರಾದ ಎ.ಎಸ್. ಪಾಟೀಲ ನಡಹಳ್ಳಿ, ಮುಖಂಡರಾದ ಕಾಶಿನಾಥ ಮುರಾಳ,ಮಾನಸಿಂಗ್ ಕೊಕಟನೂರ, ಎಂ.ಎಸ್.ಸರಶಟ್ಟಿ, ವಾಸುದೇವ ಹೆಬಸೂರ, ಶಿವಶಂಕರ ಹಿರೇಮಠ, ಪರುಶರಾಮ ಕಟ್ಟಿಮನಿ, ರಾಘವೇಂದ್ರ ಮಾನೆ ಹಾಗೂ ಪಕ್ಷದ ಪದಾಧಿಕಾರಿಗಳು ಇದ್ದರು.

## ಬೀದಿನಾಯಿಗಳ ದಾಳಿಗೆ 15ಕ್ಕೂ ಹೆಚ್ಚು ಕುರಿಮರಿಗಳ ಸಾವು

**ನೈಜ್ಯ ದೆಸೆ ನ್ಯೂಸ್**

ಮಾನ್ವಿ: ತಾಲೂಕಿನ ದೇವಿಪುರ ಗ್ರಾಮದ ನವಗ್ರಾಮದ ಸಮೀಪದ ಬಯಲು ಜಾಗದಲ್ಲಿ ಶುಕ್ರವಾರ ಮಧ್ಯಾಹ್ನ ಸುಮಾರು 2 ಗಂಟೆ ವೇಳೆಗೆ ನಾಲ್ಕರಿಂದ ಐದು ಬೀದಿನಾಯಿಗಳು ಕುರಿ ಹಿಂಡಿನ ಮೇಲೆ ಏಕಾಏಕಿ ದಾಳಿ ನಡೆಸಿದ ಪರಿಣಾಮ 15ಕ್ಕೂ ಹೆಚ್ಚು ಕುರಿಮರಿಗಳು ಸಾವನ್ನಪ್ಪಿದ್ದು, 20ಕ್ಕೂ ಹೆಚ್ಚು ಕುರಿಮರಿಗಳಿಗೆ ತೀವ್ರ ಗಾಯಗಳಾಗಿವೆ.



ಈರಲಗಡ್ಡಿ ಗ್ರಾಮದ ಕುರಿಗಾಯಿ ದೇವೇಂದ್ರಪ್ಪ ಅವರಿಗೆ ಸೇರಿದ ಕುರಿ ಹಿಂಡಿನ ಮೇಲೆ ನಡೆದ ಈ ದಾಳಿಯಲ್ಲಿ 5ಕ್ಕೂ ಹೆಚ್ಚು ಕುರಿಮರಿಗಳು ಗಂಭೀರ ಗಾಯಗೊಂಡಿದ್ದು, ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿವೆ. ಘಟನೆಯಿಂದ ಕುರಿಗಾಯಿ ದೇವೇಂದ್ರಪ್ಪ ಅವರಿಗೆ ಅಂದಾಜು 1 ಲಕ್ಷಕ್ಕೂ ಅಧಿಕ ನಷ್ಟ ಉಂಟಾಗಿದೆ ಎಂದು ತಿಳಿದುಬಂದಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಪಶು ವೈದ್ಯಕೀಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಗಾಯಗೊಂಡ ಕುರಿಮರಿಗಳನ್ನು ಪರಿಶೀಲಿಸಿ ಅಗತ್ಯ ಚಿಕಿತ್ಸೆ ಹಾಗೂ ಮುಂದಿನ ಕ್ರಮಗಳನ್ನು ಕೈಗೊಂಡಿದ್ದಾರೆ. ಗ್ರಾಮದಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಶಾಶ್ವತ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ಮಸ್ಕಿ ಪುರಸಭೆ ಅಧ್ಯಕ್ಷ ಸುರೇಶ ಹರಸೂರು ನೇತೃತ್ವದಲ್ಲಿ ಸಾಮಾನ್ಯ ಸಭೆ

**ನೈಜ್ಯ ದೆಸೆ ನ್ಯೂಸ್**

**ಮಸ್ಕಿ: ಪುರಸಭೆ ಅಧ್ಯಕ್ಷ ಸುರೇಶ ಹರಸೂರು ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ ಮಸ್ಕಿ ಪುರಸಭೆಯ ಸಾಮಾನ್ಯ ಸಭೆಯಲ್ಲಿ ಪಟ್ಟಣದ ಅಭಿವೃದ್ಧಿ ಹಾಗೂ ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ ಹಲವು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು.**

ಸಭೆಯಲ್ಲಿ ವಾರ್ಡ್ 3 ಮತ್ತು 4ರ ವಾಸಿಸುತ್ತಿರುವ ನಿವಾಸಿಗಳ ಪ್ರದೇಶವನ್ನು ಕೊಳಚೆ ಪ್ರದೇಶವೆಂದು ಘೋಷಿಸುವ ಕುರಿತು ಸುದೀರ್ಘ ಚರ್ಚೆ ನಡೆಯಿತು. ಮನೆಗಳ ಆಸ್ತಿಗಳ ಸರ್ವೆ ನಡೆಸಿ, ಅಗತ್ಯ ದಾಖಲೆಗಳನ್ನು ಸಂಗ್ರಹಿಸಿ ಪುರಸಭೆಯಿಂದ ನಿರಾಕ್ಷೇಪಣಾ ಪ್ರಮಾಣಪತ್ರ ನೀಡಲು ಹಾಗೂ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಸಲ್ಲಿಸಿ ಶೀಘ್ರ ಅನುಮೋದನೆ ಪಡೆದು ನಿವಾಸಿಗಳಿಗೆ ಹಕ್ಕುಪತ್ರ ವಿತರಿಸಲು




ಕ್ರಮ ಕೈಗೊಳ್ಳುವಂತೆ ನಿರ್ಧರಿಸಲಾಯಿತು. ಈ ಕುರಿತು ಶಾಸಕರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲು ಆಡಳಿತ ಮಂಡಳಿ ತೀರ್ಮಾನಿಸಿತು.

ಇತ್ತೀಚೆಗೆ ತುಂಗಭದ್ರಾ ಎಡದಂಡೆ ಕಾಲುವೆಯಿಂದ ಹರಿದು ಬಂದ ನೀರನ್ನು ಪಟ್ಟಣದ ಕುಡಿಯುವ ನೀರಿನ ಕೆರೆಯಲ್ಲಿ ಸಂಗ್ರಹಿಸಿರುವ ಹಿನ್ನೆಲೆಯಲ್ಲಿ, ಸೆಪ್ಟೆಂಬರ್ ಅಂತ್ಯದವರೆಗೆ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಸಾರ್ವಜನಿಕರಿಗೆ ಐದು ದಿನಕ್ಕೊಮ್ಮೆ ನೀರು ಪೂರೈಕೆ ಮಾಡಲು ಸಭೆಯಲ್ಲಿ ನಿರ್ಧರಿಸಲಾಯಿತು.2024?25ನೇ ಸಾಲಿನ ಎಸ್‌ಬಿಎಂ (ಸಿಬಿ) 2.0 ಯೋಜನೆಯಡಿ ಘನತ್ಯಾಜ್ಯ ನಿರ್ವಹಣೆಯಲ್ಲಿ ರಾಜ್ಯದಲ್ಲಿಯೇ ಮಾದರಿಯಾಗಿರುವ ಮೈಸೂರು ಮಹಾನಗರ ಪಾಲಿಕೆಯ ಘಟಕಕ್ಕೆ ಪುರಸಭೆಯ ಸದಸ್ಯರು, ಆರೋಗ್ಯ ಸಿಬ್ಬಂದಿ ಹಾಗೂ ಅಧಿಕಾರಿಗಳು ಆಗಸ್ಟ್ 7ರಂದು ಅಧ್ಯಯನ ಪ್ರವಾಸ ಕೈಗೊಳ್ಳಲಿದ್ದಾರೆಎಂದು ಪುರಸಭೆ ಮುಖ್ಯ ಅಧಿಕಾರಿ ನರಸರೆಡ್ಡಿ ತಿಳಿಸಿದರು.

ಇದೇ ವೇಳೆ, 2026?27ನೇ ಸಾಲಿನ ಎಸ್‌ಎಫ್‌ಸಿ ಯೋಜನೆಯಡಿ ವೈಯಕ್ತಿಕ ಚಟುವಟಿಕೆ ಘಟಕದ ಫಲಾನುಭವಿಗಳ ಆಯ್ಕೆ ಸಂಬಂಧ ಅರ್ಜಿ ಸಲ್ಲಿಸಲು ಅನೇಕ ಸದಸ್ಯರು ಮತ್ತು ವಿದ್ಯಾರ್ಥಿಗಳಿಗೆ ಸಮರ್ಪಕ ಮಾಹಿತಿ ಲಭ್ಯವಾಗದ ಹಿನ್ನೆಲೆಯಲ್ಲಿ, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಆಗಸ್ಟ್ 15ರವರೆಗೆ ವಿಸ್ತರಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು.ಸಭೆಯಲ್ಲಿ ಪುರಸಭೆಯ ಉಪಾಧ್ಯಕ್ಷ ಗೀತಾ ಶಿವರಾಜ, ಸ್ಥಾಯಿ ಸಮಿತಿ ಅಧ್ಯಕ್ಷ ಚೇತನ್ ಪಾಟೀಲ್, ಮ್ಯಾನೇಜರ್ ಸತ್ಯನಾರಾಯಣ ಸೇರಿದಂತೆ ಪುರಸಭೆ

## ಗುಣಮಟ್ಟದ ಶಿಕ್ಷಣಕ್ಕಾಗಿ ಖಾಸಗಿ ಶಿಕ್ಷಣ ಸಂಸ್ಥೆಗಳ ಶಿಕ್ಷಕರಿಗೆ ವಿಶೇಷ ತರಬೇತಿ ಕಾರ್ಯಾಗಾರ: ಪ್ರಕಾಶ್ ಪಾಟೀಲ್

**ನೈಜ್ಯ ದೆಸೆ ನ್ಯೂಸ್**

**ಇಂದಿನ ವೇಗವಾಗಿ ಬದಲಾಗುತ್ತಿರುವ ಶೈಕ್ಷಣಿಕ ವ್ಯವಸ್ಥೆಗೆ ತಕ್ಕಂತೆ ಶಿಕ್ಷಕರನ್ನು ಸಜ್ಜುಗೊಳಿಸಲು ನಮ್ಮ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದಿಂದ ಹಮ್ಮಿಕೊಂಡಿರುವ "ಶಿಕ್ಷಕರ ತರಬೇತಿ ಕಾರ್ಯಾಗಾರ"ದ ಕುರಿತು ಮಾತನಾಡಿ,**

ನೂತನ ರಾಷ್ಟ್ರೀಯ ಶಿಕ್ಷಣ ನೀತಿ (NEP) ಆಧಾರಿತ ಬೋಧನಾ ಪದ್ಧತಿ, ಆಧುನಿಕ ತಂತ್ರಜ್ಞಾನ ಮತ್ತು ಡಿಜಿಟಲ್ ಪರಿಕರಗಳ ಬಳಕೆಯನ್ನು ಶಿಕ್ಷಕರಿಗೆ ಪರಿಚಯಿಸುವುದು. ಮತ್ತು ಕೇವಲ ಪಠ್ಯಪುಸ್ತಕದ ಬೋಧನೆಗೆ ಸೀಮಿತವಾಗದೆ, ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಮತ್ತು ವಿಮರ್ಶಾತ್ಮಕ ಚಿಂತನೆಯನ್ನು ಬೆಳೆಸುವ ಕೌಶಲ್ಯಗಳನ್ನು ಶಿಕ್ಷಕರಿಗೆ ಕಲಿಸಲಾಗುವುದು.




ತರಗತಿ ಕೋಣೆಯಲ್ಲಿ ವಿದ್ಯಾರ್ಥಿಗಳ ಮಾನಸಿಕ ಒತ್ತಡ ನಿರ್ವಹಣೆ ಹಾಗೂ ಮಕ್ಕಳ ವರ್ತನೆಯನ್ನು ಸಕಾರಾತ್ಮಕವಾಗಿ ನಿರ್ವಹಿಸುವ ಬಗ್ಗೆ ತಜ್ಞರಿಂದ ವಿಶೇಷ ಮಾರ್ಗದರ್ಶನ ನೀಡಲಾಗುವುದು. "ಶಿಕ್ಷಣದ ಗುಣಮಟ್ಟ ಸುಧಾರಿಸಬೇಕಾದರೆ ಮೊದಲು ಶಿಕ್ಷಕರ ಕೌಶಲ್ಯಗಳು ನವೀಕರಣಗೊಳ್ಳಬೇಕು. ಈ ತರಬೇತಿಯು ಶಿಕ್ಷಕರಲ್ಲಿ ಹೊಸ ಉತ್ಸಾಹ ತುಂಬಲಿದ್ದು, ಇದರ ಸಂಪೂರ್ಣ ಪ್ರಯೋಜನವನ್ನು ಪಡೆದುಕೊಂಡು ಪ್ರತಿಯೊಬ್ಬ ಶಿಕ್ಷಕರು ಮಾದರಿ ಶಿಕ್ಷಕರಾಗಬೇಕು" ಎಂದು ಸಿರವಾರ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರಾದ ಪ್ರಕಾಶ್ ಪಾಟೀಲ್ ತಿಳಿಸಿದರು.

ಈ ವೇಳೆ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷರಾದ ಟಿ ಬಸವರಾಜ್, ಹಾಗು ಸಿರವಾರ ತಾಲೂಕ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಮೋಸಿನ್ ವಾಹಬ್ ಉಪಸ್ಥಿತರಿದ್ದರು. ಈ ಕಾರ್ಯಕ್ರಮವು 01/08/2026 ಶನಿವಾರದಂದು ಸಿರವಾರ ಪಟ್ಟಣದ ವಿದ್ಯಾವಾಹಿನಿ ಶಾಲೆಯಲ್ಲಿ ಜರುಗುವುದು. ಇದರ ಸದುಪಯೋಗ ಎಲ್ಲಾ ಶಿಕ್ಷಕರು ಪಡೆದುಕೊಳ್ಳಲು ಕೋರಲಾಗಿದೆ.

# ನಿವೇಶನ ಲೇಔಟ್‌ಗಳನ್ನು ಅಭಿವೃದ್ಧಿಪಡಿಸಿ ಮೂಲ ಸೌಕರ್ಯ ಒದಗಿಸಲು ಒತ್ತಾಯ

**ನೈಜ್ಯ ದೆಸೆ ನ್ಯೂಸ್**

**ಮಸ್ಕಿ: ಪುರಸಭೆ ವ್ಯಾಪ್ತಿಗೆ ಒಳಪಡುವ ಸರ್ಕಾರಿ ನಿವೇಶನಗಳ ಲೇಔಟ್‌ಗಳನ್ನು ಅಭಿವೃದ್ಧಿ ಪಡಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ನಗರ ಘಟಕದಿಂದ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಪತ್ರ ಸಲಿಸುವ ಮೂಲಕ ಒತ್ತಾಯಿಸಿದರು.**

ಪಟ್ಟಣದ ವೆಂಕಟಾಪೂರು ಮತ್ತು ಕವಿತಾಳ ರಸ್ತೆಯ ಯಲ್ಲಮ್ಮನ ಗುಡಿ ಹತ್ತಿರದ ನಿವೇಶನಗಳ ಲೇಔಟ್‌ನಲ್ಲಿ ಹಕ್ಕುದಾರರಿಗೆ ಹಕ್ಕು ಪತ್ರಗಳನ್ನು ವಿತರಿಸಿ ಸುಮಾರು 8-10 ವರ್ಷಗಳು ಕಳೆದರೂ ಮೂಲಭೂತ ಸೌಲಭ್ಯಗಳಾದ ವಿದ್ಯುತ್, ರಸ್ತೆ, ಚರಂಡಿ, ಕುಡಿಯುವ ನೀರು



ಮತ್ತು ಶೌಚಾಲಯ ಸೌಲಭ್ಯ ಇಲ್ಲದಿರುವದರಿಂದ ಹಕ್ಕು ಪತ್ರ ಪಡೆದುಕೊಂಡ ಫಲಾನುಭವಿಗಳಿಗೆ ಸದರಿ ನಿವೇಶನಗಳಲ್ಲಿ ಮನೆಗಳನ್ನು ನಿರ್ಮಿಸಿಕೊಳ್ಳಲು ಹಿಂದೇಟು ಹಾಕುತ್ತಿದ್ದಾರೆ.

ಈ ನಿವೇಶನಗಳಲ್ಲಿ ಮುಳ್ಳು ಕಂಟೆಗಳು, ಗಿಡ-ಮರಗಳು ಬೆಳೆದು ನಿಂತಿವೆ. ಕೂಡಲೇ ಪುರಸಭೆ ಅಧಿಕಾರಿಗಳು ಮೇಲ್ಕಂಡ ಸರಕಾರಿ ನಿವೇಶನಗಳಲ್ಲಿ ಬೆಳೆದಿರುವ ಜಾಲಿ ಗಿಡಗಳನ್ನು ಮತ್ತು ಮುಳ್ಳು ಕಂಟೆಗಳನ್ನು ತೆರವುಗೊಳಿಸಿ ಸದರಿ ನಿವೇಶನಗಳಲ್ಲಿ ಮನೆಗಳ ನಿರ್ಮಿಸಿಕೊಳ್ಳಲು ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದರು. ಪುರಸಭೆ ವ್ಯಾಪ್ತಿಯಲ್ಲಿ 23 ವಾರ್ಡಗಳಿದ್ದು, ವಾರ್ಡ್ಗಳ ಹೆಸರು ಸೂಚಿಸುವ ಮಾರ್ಗ ಸೂಚಕ ಫಲಕಗಳನ್ನು ಅಳವಡಿಸಬೇಕೆಂದು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಮಲ್ಲಿಕ್ ಮುರಾರಿ, ಹುಲುಗಪ್ಪ, ಬಸವರಾಜ ಇದ್ದರು.

# ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿ, ಈಡೇರಿಸಲು ನಿರಂತರವಾಗಿ ಶ್ರಮಿಸಲಾಗುವುದು : ತಾಲೂಕು ಅಧ್ಯಕ್ಷ ಹನುಮಂತಪ್ಪ

**ನೈಜ್ಯ ದೆಸೆ ನ್ಯೂಸ್**

**ಬಳ್ಳಾರಿ / ಕಂಪ್ಲಿ : ಶಿಕ್ಷಣದಲ್ಲಿ ಸಾವಿರಾರು ಸಮಸ್ಯೆಗಳಿದ್ದು, ಇಂತಹ ಸಮಸ್ಯೆಗಳಿಗೆ ಒಗ್ಗಟ್ಟಿನೊಂದಿಗೆ ಹೋರಾಟದ ಮೂಲಕ ಬಗೆಹರಿಸಿಕೊಳ್ಳುವ ಜೊತೆಗೆ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿ, ಈಡೇರಿಸಲು ನಿರಂತರವಾಗಿ ಶ್ರಮಿಸಲಾಗುವುದು ಎಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಹನುಮಂತಪ್ಪ ಹೇಳಿದರು.**

ಪಟ್ಟಣದ ಅಂಬೇಡ್ಕರ್ ವೃತ್ತದ ಬಳಿಯ ಕೆರೆ ಶಾಲೆಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಛೇರಿಯಲ್ಲಿ ಗುರುವಾರ ಸಂಜೆ ಹಮ್ಮಿಕೊಂಡಿದ್ದ ತಾಲೂಕು ಸಂಘದ ನೂತನ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಚುನಾವಣಾಧಿಕಾರಿ ನಿಯಮಾನುಸಾಗರವಾಗಿ ತಾಲೂಕು ಘಟಕಕ್ಕೆ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. ಪ್ರಜಾಪ್ರಭುತ್ವದ ಅಡಿಯಲ್ಲಿ ಚುನಾವಣಾ ಪ್ರಕ್ರಿಯೆ ನಡೆದಿದೆ. ತಾಲೂಕಿನಲ್ಲಿ ಎರಡು ಸಂಘಟನೆಗಳು ಆಗಿರುವುದು ನೋವಿನ




ಸಂಗತಿಯಾಗಿದೆ. ನಮ್ಮ ಸಂಘದ ಮೂಲಕ ತಾಲೂಕಿನ ಪ್ರತಿಯೊಬ್ಬ ಶಿಕ್ಷಕರ ಕೆಲಸಗಳನ್ನು ಪ್ರಾಮಾಣಿಕವಾಗಿ ಮಾಡಲಾಗುವುದು. ಶಿಕ್ಷಣದಲ್ಲಿ ಸಾವಿರಾರು ಸಮಸ್ಯೆಗಳಿದ್ದು, ಇಂತಹ ಸಮಸ್ಯೆಗಳಿಗೆ ಒಗ್ಗಟ್ಟಿನೊಂದಿಗೆ ಹೋರಾಟದ ಮೂಲಕ ಬಗೆಹರಿಸಿಕೊಳ್ಳಬೇಕಾಗಿದೆ. ಸಂಘವನ್ನು ಉಳಿಸಿ ಬೆಳೆಸೋಣ. ಸಂಘಕ್ಕೆ ವ್ಯಕ್ತಿ, ಶಾಶ್ವತವಲ್ಲ, ವ್ಯಕ್ತಿತ್ವ ಶಾಶ್ವತ. ಪ್ರಜಾಸತ್ತಾತ್ಮಕ ಹಾಗೂ ಸಂವಿಧಾನದ ಅಡಿಯಲ್ಲಿ ರಾಜ್ಯದ್ಯಂತ ಚುನಾವಣಾ ಅಧಿಕಾರಿಗಳು ನೇಮಕದೊಂದಿಗೆ ಚುನಾವಣಾ ಪ್ರಕ್ರಿಯೆ ಕಂಪ್ಲಿ ತಾಲೂಕಿನಲ್ಲಿ ನಡೆದಿದ್ದು ಅಧಿಕೃತವಾಗಿ ನಮ್ಮ ಸಂಘ ರಚನೆಯಾಗಿದೆ ಚುನಾವಣಾ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದ ಮತ್ತು ಎಲ್ಲಾ ಶಿಕ್ಷಕರು ಸದಸ್ಯತ್ವ ಶುಲ್ಕ ಕಟ್ಟುವ ಡಿಪಿಎಆರ್ ಸಂಘ ಮಾನ್ಯತೆ ಪಡೆದ ಚಂದ್ರಶೇಖರ ನುಗ್ಗಿ ಹಾಗೂ ಶ್ರೀ ಚೇತನ್ ಅವರ ರಾಜ್ಯ ಸಂಘವೇ ಅಂತಿಮ ಎಂದರು.

ನಂತರ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಹೆಚ್.ದೊಡ್ಡಬಸಪ್ಪ ಮಾತನಾಡಿ, ಶಿಕ್ಷಕರ ಸಮಸ್ಯೆಗಳನ್ನು ಆಲಿಸಿ, ಬಗೆಹರಿಸುವಲ್ಲಿ ಸಾಕಷ್ಟು ಶ್ರಮಿಸಲಾಗಿದೆ. ಸಂಘ ವಿರೋಧಿ ಚಟುವಟಿಕೆ ಹಿನ್ನಲೆ ಕೆಲ ಶಿಕ್ಷಕರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಿದ್ದಾರೆ. ಕೆಲವರು ಮೇಲಾಧಿಕಾರಿಗಳ ಕೈಗೊಂಬೆಯಾಗಿ ಕೆಲಸ ಮಾಡುತ್ತಿದ್ದು, ನಾವು ಪ್ರತಿಯೊಂದು ಹಂತದಲ್ಲಿ ಅಧಿಕಾರಿಗಳಿಗೆ ಪ್ರಶ್ನೆ ಮಾಡುವುದರಿಂದ ನಮ್ಮನ್ನು ದೂರ ಮಾಡುತ್ತಿದ್ದಾರೆ. ಯಾವುದೇ ಸ್ಥಾನದಲ್ಲಿದ್ದರೂ ಶಿಕ್ಷಕರ ಯೋಗಕ್ಷೇಮದ ಜೊತೆಗೆ ಅವರ ಕಷ್ಟಗಳಿಗೆ ಸ್ಪಂದಿಸಿ, ಈಡೇರಿಸಲಾಗುವುದು ಎಂದರು.

ತಾಲೂಕು ನೂತನ ಅಧ್ಯಕ್ಷ ಹನುಮಂತಪ್ಪ, ಪ್ರಧಾನ ಕಾರ್ಯದರ್ಶಿ ಹೆಚ್. ಜಡಿಯಪ್ಪ , ಖಜಾಂಚಿ ಐ.ಗಂಗಮ್ಮ, ಗೌರವಾಧ್ಯಕ್ಷ ಸಿ.ಕೆ.ರಾಮಚಂದ್ರಪ್ಪ, ಉಪಾಧ್ಯಕ್ಷರಾದ ಸುನಿತಾ ಪೂಜಾರ್, ಕೆ.ಚಂದ್ರಶೇಖರ್, ಸಂಘಟನಾ ಕಾರ್ಯದರ್ಶಿ ಕೆ.ವೀರೇಶ್, ಅಗಳಿ ನಾಗರತ್ನ, ಸಹ ಕಾರ್ಯದರ್ಶಿ ಮಾಲಿಕ್, ಮರಿಸ್ವಾಮಿ ಇವರಿಗೆ ಪ್ರಮಾಣ ಪತ್ರ ನೀಡಿ, ಗೌರವಿಸುವ ಮೂಲಕ ಪದಗ್ರಹಣ ಮಾಡಲಾಯಿತು. ನಂತರ ತಾಲೂಕು ನಾಮ ನಿರ್ದೇಶಕ ಸದಸ್ಯರಾದ ಸುನಿತಾ, ಕೆ.ರಾಜೇಶ್ವರಿ, ಸದಾಶಿವ, ದೊಡ್ಡಬಸಪ್ಪ ಇವರನ್ನು ಗೌರವಿಸಲಾಯಿತು

ಜಿಲ್ಲಾ ಸಂಘದ ನಾಮ ನಿರ್ದೇಶಕರಾದ ವೀರ ಕುಮಾರ್, ಕೆ.ಮಲ್ಲಿಕಾರ್ಜುನ್, ಕರುಣಾಕರಾಚಾರ್, ಕೆ.ಮಲ್ಲಿಕಾರ್ಜುನ, ಕೆ.ಚಿಕ್ಕಜಾಯಿಗನೂರು, ಮೂರ್ತಿ ಇವರನ್ನು ಆಯ್ಕೆ ಮಾಡಿ ಸನ್ಮಾನಿಸಿ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು. ರಾಜ್ಯ ಸಂಘಕ್ಕೆ ಶ್ರೀತ ರಾಜ ನಾಯಕ್ ರವಿ ಕುಮಾರಣ್ಣ ಆಯ್ಕೆ ಮಾಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು, ಶಿಕ್ಷಕರು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಎಂಎಸ್‌ಡಬ್ಲ್ಯು (MSW ? Master of Social Work)

ಎಂಎಸ್‌ಡಬ್ಲ್ಯು (MSW - Master of Social Work) ಎನ್ನುವುದು ಸಮಾಜ ಸೇವೆ, ಸಮಾಜ ಕಲ್ಯಾಣ, ಮಾನವ ಹಕ್ಕುಗಳು ಮತ್ತು ಸಮುದಾಯ ಅಭಿವೃದ್ಧಿ ಕ್ಷೇತ್ರದಲ್ಲಿ ವೃತ್ತಿಪರ ಕೌಶಲ್ಯವನ್ನು ಬೆಳೆಸುವ 2 ವರ್ಷಗಳ ಸ್ನಾತಕೋತ್ತರ (PG) ಪದವಿ ಕೋರ್ಸ್ ಆಗಿದೆ. ಸಮಾಜದಲ್ಲಿ ಬದಲಾವಣೆ ತರಲು ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳಿಗೆ ಇದು ಅತ್ಯುತ್ತಮ ಆಯ್ಕೆಯಾಗಿದೆ. ಈ ಕೋರ್ಸ್‌ನಲ್ಲಿ ತರಗತಿ ಕಲಿಕೆಯ ಜೊತೆಗೆ ಕಡ್ಡಾಯ ಕ್ಷೇತ್ರ ಕಾರ್ಯ (Field Work), ಗ್ರಾಮೀಣ ಅಧ್ಯಯನ, ಸಂಸ್ಥೆಗಳಲ್ಲಿ ತರಬೇತಿ (Internship) ಹಾಗೂ ಸಂಶೋಧನಾ ಪ್ರಾಜೆಕ್ಟ್‌ಗಳನ್ನು ಒಳಗೊಂಡಿರುತ್ತದೆ.

**ಕೋರ್ಸ್ ವಿವರಗಳು**

- ಕೋರ್ಸ್ ಹೆಸರು: Master of Social Work (MSW)
- ಕೋರ್ಸ್ ಮಟ್ಟ: ಸ್ನಾತಕೋತ್ತರ (Postgraduate)
- ಅವಧಿ: 2 ವರ್ಷಗಳು (4 ಸೆಮಿಸ್ಟರ್‌ಗಳು)
- ಅರ್ಹತೆ: ಯಾವುದೇ ವಿಷಯದಲ್ಲಿ ಪದವಿ (BA, BSW, B.Com, B.Sc, BBA, BBM, BCA ಮುಂತಾದವು)
- ಕನಿಷ್ಠ ಅಂಕಗಳು: ಸಾಮಾನ್ಯವಾಗಿ 45%?50% (ವಿಶ್ವವಿದ್ಯಾಲಯದ ನಿಯಮದಂತೆ ಬದಲಾಗಬಹುದು)
- ಪ್ರವೇಶ ವಿಧಾನ: ಮೆರಿಟ್ ಅಥವಾ ಪ್ರವೇಶ ಪರೀಕ್ಷೆ

**ಪ್ರಮುಖ ವಿಷಯಗಳು**

- ಸಮಾಜ ಕಾರ್ಯದ ತತ್ವಗಳು
- ಸಮಾಜಶಾಸ್ತ್ರ ಮತ್ತು ಮನೋವಿಜ್ಞಾನ
- ಮಾನವ ಹಕ್ಕುಗಳು ಮತ್ತು ಸಾಮಾಜಿಕ ನ್ಯಾಯ
- ಸಮುದಾಯ ಸಂಘಟನೆ
- ಗ್ರಾಮೀಣ ಮತ್ತು ನಗರಾಭಿವೃದ್ಧಿ
- ಕುಟುಂಬ ಮತ್ತು ಮಕ್ಕಳ ಕಲ್ಯಾಣ
- ಮಹಿಳಾ ಸಬಲೀಕರಣ
- ವೈದ್ಯಕೀಯ ಮತ್ತು ಮನೋವೈದ್ಯಕೀಯ ಸಮಾಜ ಕಾರ್ಯ
- ಕಾರ್ಮಿಕ ಕಲ್ಯಾಣ ಮತ್ತು ಕೈಗಾರಿಕಾ ಸಂಬಂಧಗಳು
- ಮಾನವ ಸಂಪನ್ಮೂಲ ನಿರ್ವಹಣೆ (HRM)
- ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ (CSR)
- ಸಾಮಾಜಿಕ ಸಂಶೋಧನೆ ಮತ್ತು ಅಂಕಿಅಂಶಗಳು
- ಯೋಜನಾ ನಿರ್ವಹಣೆ ಮತ್ತು ಎನ್‌ಜಿಒ ಆಡಳಿತ
- ಕೌನ್ಸೆಲಿಂಗ್ ಕೌಶಲ್ಯಗಳು

**ಪ್ರಮುಖ ಸ್ಪೆಷಲೈಸೇಶನ್‌ಗಳು**

- ವೈದ್ಯಕೀಯ ಮತ್ತು ಮನೋವೈದ್ಯಕೀಯ ಸಮಾಜ ಕಾರ್ಯ
- ಸಮುದಾಯ ಅಭಿವೃದ್ಧಿ
- ಕುಟುಂಬ ಮತ್ತು ಮಕ್ಕಳ ಕಲ್ಯಾಣ
- ಮಾನವ ಸಂಪನ್ಮೂಲ ನಿರ್ವಹಣೆ (HR)
- ಗ್ರಾಮೀಣಾಭಿವೃದ್ಧಿ
- ನಗರ ಸಮುದಾಯ ಅಭಿವೃದ್ಧಿ
- ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
- ಶಾಲಾ ಸಮಾಜ ಕಾರ್ಯ
- ವೃದ್ಧರ ಕಲ್ಯಾಣ
- ಕಾರ್ಮಿಕ ಕಲ್ಯಾಣ

**ಕಡ್ಡಾಯ ಕ್ಷೇತ್ರ ಕಾರ್ಯ (Field Work)**

MSW ಕೋರ್ಸ್‌ನ ಪ್ರಮುಖ ಭಾಗವೇ ಕ್ಷೇತ್ರ ಕಾರ್ಯವಾಗಿದೆ. ವಿದ್ಯಾರ್ಥಿಗಳು ಪ್ರತಿ ಸೆಮಿಸ್ಟರ್‌ನಲ್ಲಿ ವಿವಿಧ ಸಂಸ್ಥೆಗಳಲ್ಲಿ ಪ್ರಾಯೋಗಿಕ ತರಬೇತಿ ಪಡೆಯುತ್ತಾರೆ.

- ಗ್ರಾಮ ಪಂಚಾಯಿತಿ ಮತ್ತು ಗ್ರಾಮೀಣಾಭಿವೃದ್ಧಿ ಯೋಜನೆಗಳು
- ಎನ್‌ಜಿಒಗಳು
- ಆಸ್ಪತ್ರೆಗಳು
- ಶಾಲೆಗಳು ಮತ್ತು ಕಾಲೇಜುಗಳು
- ಮಕ್ಕಳ ರಕ್ಷಣಾ ಕೇಂದ್ರಗಳು
- ವೃದ್ಧಾಶ್ರಮಗಳು
- ಪುನರ್ವಸತಿ ಕೇಂದ್ರಗಳು
- ಕೈಗಾರಿಕೆಗಳು ಮತ್ತು ಕಂಪನಿಗಳು

**ಅಗತ್ಯ ಕೌಶಲ್ಯಗಳು**

- ಉತ್ತಮ ಸಂವಹನ ಕೌಶಲ್ಯ
- ನಾಯಕತ್ವ ಗುಣ
- ಸಮಸ್ಯೆ ಪರಿಹಾರ ಸಾಮರ್ಥ್ಯ
- ತಂಡದೊಂದಿಗೆ ಕೆಲಸ ಮಾಡುವ ಸಾಮರ್ಥ್ಯ
- ಸಹಾನುಭೂತಿ ಮತ್ತು ಸೇವಾ ಮನೋಭಾವ
- ಕೌನ್ಸೆಲಿಂಗ್ ಕೌಶಲ್ಯ
- ವರದಿ ಬರೆಯುವ ಕೌಶಲ್ಯ

**ಉದ್ಯೋಗಾವಕಾಶಗಳು**

MSW ಪದವೀಧರರಿಗೆ ಸರ್ಕಾರಿ ಹಾಗೂ ಖಾಸಗಿ ಎರಡೂ ಕ್ಷೇತ್ರಗಳಲ್ಲಿ ಉತ್ತಮ ಅವಕಾಶಗಳಿವೆ.

- ಸಮಾಜ ಕಾರ್ಯಕರ್ತ (Social Worker)
- ವೈದ್ಯಕೀಯ ಸಮಾಜ ಕಾರ್ಯಕರ್ತ
- ಕೌನ್ಸೆಲರ್
- HR Executive
- CSR Officer
- Project Officer
- Programme Coordinator
- NGO Manager
- Community Development Officer
- Child Protection Officer
- Probation Officer
- Rehabilitation Officer
- Family Welfare Officer
- School Counsellor
- Social Researcher

**ಉದ್ಯೋಗ ನೀಡುವ ಪ್ರಮುಖ ಕ್ಷೇತ್ರಗಳು**

- ಸ್ವಯಂ ಸೇವಾ ಸಂಸ್ಥೆಗಳು (NGOs)
- ಸರ್ಕಾರಿ ಸಮಾಜ ಕಲ್ಯಾಣ ಇಲಾಖೆ
- ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
- ಆರೋಗ್ಯ ಇಲಾಖೆ
- ಆಸ್ಪತ್ರೆಗಳು
- ಮಾನಸಿಕ ಆರೋಗ್ಯ ಕೇಂದ್ರಗಳು
- ಪುನರ್ವಸತಿ ಸಂಸ್ಥೆಗಳು
- ಕಾರ್ಪೊರೇಟ್ ಕಂಪನಿಗಳು (CSR & HR)
- ಯುನಿಸೆಫ್ (UNICEF), WHO, UNDP ಮುಂತಾದ ಅಂತರರಾಷ್ಟ್ರೀಯ ಸಂಸ್ಥೆಗಳು
- ಶಿಕ್ಷಣ ಸಂಸ್ಥೆಗಳು
- ಗ್ರಾಮೀಣಾಭಿವೃದ್ಧಿ ಯೋಜನೆಗಳು

**ಉನ್ನತ ವ್ಯಾಸಂಗ**

ಒಖಫ ನಂತರ ಈ ಕೆಳಗಿನ ಕೋರ್ಸ್‌ಗಳನ್ನು ಮುಂದುವರಿಸಬಹುದು.

- M.Phil. (ಲಭ್ಯವಿರುವ ಸಂಸ್ಥೆಗಳಲ್ಲಿ)
- Ph.D. in Social Work
- PG Diploma in Counselling
- PG Diploma in Human Resource Management
- Public Health (MPH)
- Rural Development
- Disaster Management
- Labour Welfare
- NGO Management

**ವೇತನ**

- ಆರಂಭಿಕ ವೇತನ: 20,000 ರಿಂದ 40,000 ಪ್ರತಿ ತಿಂಗಳು
- ಅನುಭವದ ನಂತರ: 50,000 ರಿಂದ 1,00,000+ ಪ್ರತಿ ತಿಂಗಳು (ಸಂಸ್ಥೆ ಮತ್ತು ಹುದ್ದೆಗೆ ಅನುಗುಣವಾಗಿ)

**ಪ್ರಮುಖ ವಿಶ್ವವಿದ್ಯಾಲಯಗಳು (ಕರ್ನಾಟಕ)**

- ಬೆಂಗಳೂರು ವಿಶ್ವವಿದ್ಯಾಲಯ
- ಮೈಸೂರು ವಿಶ್ವವಿದ್ಯಾಲಯ
- ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
- ಮಂಗಳೂರು ವಿಶ್ವವಿದ್ಯಾಲಯ
- ಕುವೆಂಪು ವಿಶ್ವವಿದ್ಯಾಲಯ
- ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ (KSOU)
- ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ
- ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

**ಈ ಕೋರ್ಸ್ ಯಾರಿಗೆ ಸೂಕ್ತ**

- ಸಮಾಜ ಸೇವೆಯಲ್ಲಿ ಆಸಕ್ತಿ ಇರುವವರಿಗೆ
- ಎನ್‌ಜಿಒ ಕ್ಷೇತ್ರದಲ್ಲಿ ಕೆಲಸ ಮಾಡಲು ಬಯಸುವವರಿಗೆ
- HR ಮತ್ತು CSR ಕ್ಷೇತ್ರದಲ್ಲಿ ವೃತ್ತಿ ನಿರ್ಮಿಸಿಕೊಳ್ಳಲು ಬಯಸುವವರಿಗೆ
- ಕೌನ್ಸೆಲಿಂಗ್ ಮತ್ತು ಸಮುದಾಯ ಅಭಿವೃದ್ಧಿಯಲ್ಲಿ ಆಸಕ್ತಿ ಇರುವವರಿಗೆ
- ಸರ್ಕಾರಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಉದ್ಯೋಗ ಪಡೆಯಲು ಬಯಸುವವರಿಗೆ

ಸಾರಾಂಶ: ಎಂಎಸ್‌ಡಬ್ಲ್ಯು (MSW) ಸಮಾಜ ಸೇವೆ, ಸಮುದಾಯ ಅಭಿವೃದ್ಧಿ, ಮಾನವ ಹಕ್ಕುಗಳು, HR, CSR ಮತ್ತು ವೈದ್ಯಕೀಯ ಸಮಾಜ ಕಾರ್ಯ ಕ್ಷೇತ್ರಗಳಲ್ಲಿ ಉತ್ತಮ ವೃತ್ತಿ ಅವಕಾಶಗಳನ್ನು ಒದಗಿಸುವ ಬೇಡಿಕೆಯ ಸ್ನಾತಕೋತ್ತರ ಪದವಿಯಾಗಿದೆ.

# ವಾರ್ತಾ ಇಲಾಖೆಯಿಂದ ಬೀಳ್ಕೊಡುಗೆ ಸಮಾರಂಭ

## ವಾರ್ತಾ ಇಲಾಖೆಯಲ್ಲಿ ಪ್ರಕಾಶ್ ಅವರಿಂದ ಉತ್ತಮ ಕೆಲಸ ನಿರ್ವಹಣೆ: ಜಿ.ಸುರೇಶ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜುಲೈ 31 (ಕರ್ನಾಟಕ ವಾರ್ತೆ): ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸಿನಿ ಆಪರೇಟರ್ ಹುದ್ದೆಯಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿದ ಎ.ಪ್ರಕಾಶ್ ಅವರು ಇಂದು ವಯೋನಿವೃತ್ತಿ ಹೊಂದಿದರು.**

ಈ ಹಿನ್ನೆಲೆಯಲ್ಲಿ ಇಲಾಖೆಯ ವತಿಯಿಂದ ಆಯೋಜಿಸಲಾದ ಬೀಳ್ಕೊಡುಗೆ ಸಮಾರಂಭದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ, ಪತ್ರಕರ್ತರು ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಶುಭ ಹಾರೈಸಲಾಯಿತು. ಸಮಾರಂಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಜಿ.ಸುರೇಶ್ ಅವರು ಮಾತನಾಡಿ, ನಿವೃತ್ತರು ತಮ್ಮ ಸೇವಾ ಅವಧಿಯಲ್ಲಿ ಪ್ರಾಮಾಣಿಕತೆ, ಕರ್ತವ್ಯ ನಿಷ್ಠೆ ಮತ್ತು ಶಿಸ್ತುಬದ್ಧ ಕಾರ್ಯನಿರ್ವಹಣೆಯ ಮೂಲಕ ಇಲಾಖೆಯಲ್ಲಿ ಉತ್ತಮ ಕೆಲಸ ನಿರ್ವಹಣೆ ಮಾಡಿದ್ದಾರೆ. ಅವರ ಸೇವೆ ಸಹೋದ್ಯೋಗಿಗಳಿಗೆ ಸದಾ ಮಾದರಿಯಾಗಿದ್ದು, ನಿವೃತ್ತಿಯ ನಂತರವೂ ಉತ್ತಮ ಆರೋಗ್ಯ, ಸುಖ-ಶಾಂತಿ ಹಾಗೂ ನೆಮ್ಮದಿಯ ಜೀವನ ಸಾಗಿಸಲಿ ಎಂದು ಶುಭಕೋರಿದರು.




ಈ ವೇಳೆ ವಯೋ ನಿವೃತ್ತರಾದ ಎ.ಪ್ರಕಾಶ್ ಅವರು ಮಾತನಾಡಿ, ಸೇವಾ ಅವಧಿಯಲ್ಲಿ ಸಹಕರಿಸಿದ ಎಲ್ಲಾ ಅಧಿಕಾರಿಗಳು, ಸಹೋದ್ಯೋಗಿಗಳು ಹಾಗೂ ಸಿಬ್ಬಂದಿಗಳಿಗೆ, ಪತ್ರಕರ್ತರಿಗೆ ಕೃತಜ್ಞತೆ ಸಲ್ಲಿಸಿದರು. ಇಲಾಖೆಯಲ್ಲಿ ಕಾರ್ಯನಿರ್ವಹಿಸಿದ ಅನುಭವವನ್ನು ಸ್ಮರಿಸಿಕೊಂಡ ಅವರು, ತಮ್ಮ ಸೇವಾ ಜೀವನದ ನೆನಪುಗಳನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಇಲಾಖೆಯ ವತಿಯಿಂದ ಸ್ಮರಣಿಕೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಈ ವೇಳೆ ರಾಯಚೂರಿನ ವಿವಿಧ ಪತ್ರಿಕೆಗಳ ಸಂಪಾದಕರು ಹಾಗೂ ಪತ್ರಕರ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ, ಎ.ಪ್ರಕಾಶ್ ಅವರ ಸೇವೆಯ ಕುರಿತು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಆರ್. ಗುರುನಾಥ, ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯಕುಮಾರ್ ಜಾಗಟಗಲ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿಯ ಸದಸ್ಯರಾದ ಬಸವರಾಜ ನಾಗಡದಿನ್ನಿ, ಅರವಿಂದ್ ಕುಲಕರ್ಣಿ, ಹಿರಿಯ ಪತ್ರಕರ್ತರಾದ ಶಿವಮೂರ್ತಿ ಹಿರೇಮಠ, ರಾಯಚೂರು ಜಿಲ್ಲೆಯ ವಿವಿಧ ಪತ್ರಿಕೆಗಳ ಸಂಪಾದಕರಾದ ಚನ್ನಬಸವ ಬಾಗಲವಾಡ, ವೀರರೆಡ್ಡಿ, ಸುಶೀಲೇಂದ್ರ ಕುಲಕರ್ಣಿ, ಶಿವರಾಜ ಸೇರಿದಂತೆ ದೃಶ್ಯ ಮಾಧ್ಯಮದ ಪ್ರತಿನಿಧಿಗಳು, ವಾರ್ತಾ ಇಲಾಖೆಯ ಸಿಬ್ಬಂದಿಗಳಾದ ನರೇಶ, ರಮೇಶ ಗೌಡೂರು, ಅಬ್ಬಾಸ್ ಖಾನ್, ಮಹಮ್ಮದ್ ಅಜರ್ ಉಲ್ ಹಕ್, ಅಂಬ್ರೇಶ್ ಸೇರಿದಂತೆ ಸಾರ್ವಜನಿಕರು ಇದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಯಾದ ಡಾ.ದಂಡಪ್ಪ ಬಿರಾದಾರ್ ಅವರು ನೆರವೇರಿಸಿದರು.

# ಶಾಸಕ ಹಂಪನಗೌಡ ಬಾದರ್ಲಿ ನೇತೃತ್ವದಲ್ಲಿ ವಸತಿ ನಿಲಯಗಳ ಅಧಿಕಾರಿಗಳ ಸಭೆ ಶಿಸ್ತು ಪಾಲಿಸಲು ಸೂಚನೆ



❑ ನೈಜ್ಯ ದೆಸೆ ನ್ಯೂಸ್

**ವಾರ್ಡನ್ ಮತ್ತು ಪ್ರಾಂಶುಪಾಲರ ಕೆಲಸ ಏನು? ಅದು ಯಾವುದು ನಿಮ್ಮ ಕೈಯಲ್ಲಿ ಕಂಟ್ರೋಲ್ ಇಲ್ಲವೆಂದ ಮೇಲೆ ನಿವ್ಯಾಕೆ ವಾರ್ಡನ್ ಆಗಿದ್ದೀರಿ, ಪ್ರಾಂಶುಪಾಲರು ಆಗಿದ್ದೀರಿ ಎಂದು ಶಾಸಕ ಹಂಪನಗೌಡ ಬಾದರ್ಲಿ ನಗರದ ನಗರಸಭೆ ಸಭಾಂಗಣದಲ್ಲಿ ಕರೆದ ವಸತಿ ನಿಲಯಗಳ ತಾಲೂಕಿನ ಎಲ್ಲಾ ಅಧಿಕಾರಿಗಳು, ಪ್ರಾಂಶುಪಾಲರು, ವಾರ್ಡನ್, ಸೂಪರಡೆಂಟ್ ಗಳ ಸಭೆ ನಡೆಸಿ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡರು.**

ಪ್ರತಿಯೊಂದು ವಸತಿ ನಿಲಯಗಳಿಗೆ ಸರ್ಕಾರದಿಂದ ನಿಮಗೆ ಬೇಕಾದ ವಾಷಿಂಗ್ ಮಿಷನ್, ಕಂಪ್ಯೂಟರ್ ಲ್ಯಾಬ್, ಸ್ಮಾರ್ಟ್ ಕ್ಲಾಸ್, ಕ್ಲೀನಿಂಗ್ ಗೆ ಬೇಕಾದ ಎಲ್ಲಾ ಸೌಲಭ್ಯಗಳನ್ನು ಕೊಡಿಸಲು ನಾವು ರೆಡಿ ಇದ್ದೇವೆ. ವಸತಿ ನಿಲಯಗಳಿಗೆ ಏನೆಲ್ಲ ಮೂಲಭೂತ ಸೌಲಭ್ಯ ಬೇಕು, ಯಾವುದಾದರು ವಸತಿ ನಿಲಯದಲ್ಲಿ ಕೊರತೆ ಇದ್ದರೆ, ಆ ಎಲ್ಲಾ ಮಾಹಿತಿಗಳನ್ನು ಬರೆದು ಕೊಡಿ ಸರ್ಕಾರದಿಂದ ಮಂಜೂರು ಮಾಡಿಸಿಕೊಡುವೆ. ಇನ್ನೊಂದೆ ಈ ರೀತಿಯ ಯಾವುದೇ ಅವಘಡಗಳು ನಡೆದರೆ ಅದಕ್ಕೆ ವಸತಿ ನಿಲಯಗಳ ಅಧಿಕಾರಿಗಳೆ ನೇರ ಹೊಣೆಗಾರರನ್ನಾಗಿ ಮಾಡಬೇಕಾಗುತ್ತದೆ ಎಂದು ಖಡಕ್ ಎಚ್ಚರಿಕೆ ನೀಡಿ, ವಸತಿ ನಿಲಯಗಳಲ್ಲಿ ಮೊದಲ ಆದ್ಯತೆ ಸ್ವಚ್ಚತೆ, ಕುಡಿವ ನೀರು, ಆಹಾರ ಸಾಮಗ್ರಿಗಳ ಸ್ವಚ್ಚತೆ, ಮಕ್ಕಳಿಗೆ ಒದಗಿಸುವ ಕಿಟ್ ಗಳು, ವಾಚ್ ಮ್ಯಾನ್, ಸಿಸಿ ಕ್ಯಾಮರಾಗಳ ನಿರ್ವಹಣೆ, ಅಡುಗೆಗೆ ಸಂಬಂಧಿಸಿದಂತೆ ಎಲ್ಲಾ ಪದಾರ್ಥಗಳನ್ನು ಬಹಳಷ್ಟು ಅಚ್ಚುಕಟ್ಟಾಗಿ ನೋಡಿಕೊಳ್ಳಬೇಕು.

ವಾರಗಟ್ಟಲೇ ತರಕಾರಿ ತಂದು ಸ್ಟಾಕ್ ಮಾಡದೆ, ಪ್ರತಿದಿನ ಸೊಪ್ಪು, ತರಕಾರಿ, ಕಾಯಿಪಲ್ಯ, ತರಬೇಕು ಯಾವ ತರಕಾರಿ ಕೊಳೆಯುವ ತನಕ ಇಡಬೇಡಿ, ಅಕ್ಕಿಯಲ್ಲಿ ಗಂಟು ಕಂಡು ಬಂದರೆ, ವಾಸನೆ ಬಂದರೆ ವಾಪಸ್ ಕಳುಹಿಸಿ ಬೇರೆ ಅಕ್ಕಿ ತರಿಸಿಕೊಳ್ಳಿ, ಎಂದು ಸಭೆಗೆ ಹಾಜುರಾಗಿದ್ದ ಅಧಿಕಾರಿಗಳಿಗೆ ಸೂಚಿಸಿದರು. ಸಂಘಟನೆಗಳ ಹೆಸರು ಹೇಳಿಕೊಂಡು, ಪತ್ರಕರ್ತರೆಂದು ಬಂದು, ಫೋಟೋ, ಮತ್ತು ವಿಡಿಯೋ ಮಾಡುತ್ತಾರೆ ಎಂದು ದೂರಿದ ವಾರ್ಡನ್ ಗಳು, ಪ್ರಾಂಶುಪಾಲರಿಗೆ ತಹಶೀಲ್ದಾರ್ ಅರುಣ್ ಕುಮಾರ್ ದೇಸಾಯಿ ಮಾತನಾಡಿ, ವಿದ್ಯಾರ್ಥಿನಿಯರ ವಸತಿ ನಿಲಯದ ಒಳಗಡೆ ಯಾರಿಗೂ ಪ್ರವೇಶವಿಲ್ಲ. ಅಲ್ಲಿ ಫೋಟೋ ತೆಗೆಯಲು, ವಿಡಿಯೋ ಮಾಡಲು ಅವಕಾಶ ಇಲ್ಲ ಯಾವ ಸಂಘಟನೆ, ಪೊಲೀಸರು, ಮತ್ತು ಪತ್ರಕರ್ತರು, ಅವರು ಯಾರೇ ಆಗಿರಲಿ ಪರ್ಮಿಷನ್ ಇಲ್ಲದೆ ಒಳಗೆ ಪ್ರವೇಶಿಸುವಂತಿಲ್ಲ ಎಂದು ಅಧಿಕಾರಿಗಳಿಗೆ ಹೇಳಿದರು.

ಇದಕ್ಕೂ ಮುಂಚೆ ಗುರುವಾರ ಜು.30 ರಂದು ಹೊರವಲಯದ ಒಳಬಳ್ಳಾರಿ ರಸ್ತೆಯಲ್ಲಿರುವ ಅಲ್ಪಸಂಖ್ಯಾತ ಮೊರಾರ್ಜಿ ವಸತಿ ಶಾಲೆಯ ಮಕ್ಕಳು ಬೆಳಗಿನ ಉಪಹಾರ ಮತ್ತು ಮಧ್ಯಾನ್ಹದ ಬಿಸಿಯೂಟ ಸವಿದ 55ಕ್ಕೂ ಅಧಿಕ ಮಕ್ಕಳಿಗೆ ಹೊಟ್ಟೆನೋವು, ವಾಂತಿ, ಕಾಣಿಸಿಕೊಂಡು ನಗರದ ಪಿಡಬ್ಲ್ಯೂಡಿ ಕ್ಯಾಂಪಿನ ತಾಯಿ-ಮಕ್ಕಳ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಶಾಸಕ ಹಂಪನಗೌಡ ಬಾದರ್ಲಿಯವರು ಬೆಂಗಳೂರಿನಿಂದ ಬೆಳಿಗ್ಗೆ ಆಗಮಿಸಿ ಮೊರಾರ್ಜಿ ವಸತಿ ಶಾಲೆಗೆ ಭೇಟಿ ಕೊಟ್ಟು, ಆಹಾರ ಸಾಮಗ್ರಿಗಳನ್ನು, ಸ್ವಚ್ಚತೆ ಬಗ್ಗೆ, ಕುಡಿಯುವ ನೀರಿನ ಕುರಿತು ಪರಿಶೀಲಿಸಿ ಮಕ್ಕಳ ಜೊತೆಗೆ ಬೆರೆತು ಉಪಹಾರ ಸೇವಿಸಿದರು.

ಈ ಸಭೆಯಲ್ಲಿ ತಾಲೂಕು ಪಂಚಾಯತಿ ಇಒ ಚಂದ್ರಶೇಖರ, ನಗರಸಭೆ ಪೌರಾಯುಕ್ತ ಪಾಂಡುರಂಗ ಇಟಗಿ, ಹಾಗೂ ಡಿವೈಎಸ್ಪಿ ಜಿ.ಚಂದ್ರಶೇಖರ, ಸೇರಿದಂತೆ ತಾಲೂಕು ಮಟ್ಟದ ವಸತಿ ನಿಲಯಗಳ ವಾರ್ಡನ್, ಪ್ರಾಂಶುಪಾಲರು, ಸೂಪರಡೆಂಟ್ ಗಳು ಇದ್ದರು.

# ಜಾಲಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಅದ್ದೂರಿ ಸ್ವಾಗತ ಸಮಾರಂಭ

❑ ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜು (RR-141)ಯಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿಯುಸಿ ನೂತನ ವಿದ್ಯಾರ್ಥಿಗಳಿಗಾಗಿ "ವೆಲ್ಕಮ್ ಪಾರ್ಟಿ?2026" ಕಾರ್ಯಕ್ರಮವನ್ನು ಅತ್ಯಂತ ವಿಜ್ರಂಭಣೆಯಿಂದ ಹಾಗೂ ಸಂಭ್ರಮದಿಂದ ಆಯೋಜಿಸಲಾಯಿತು.**

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಜಾಲಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಹನುಮಂತಿ ಶಿವಬಸಪ್ಪ ರಾಮ್ ಪಾಳಿ ಭಾಗವಹಿಸಿ, ಪೂಜ್ಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ನೂತನ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಶಿಕ್ಷಣವೇ ಭವಿಷ್ಯದ ಬುನಾದಿ ವಿಶೇಷ ಉಪನ್ಯಾಸ ನೀಡಿದ ಜಾಲಹಳ್ಳಿ ಪದವಿ ಕಾಲೇಜಿನ ಪ್ರಾಚಾರ್ಯ ಶ್ರೀ ಪ್ರಭುಲಿಂಗ ಸಪಲಿ ಅವರು, "ಪದವಿ ಪೂರ್ವ ಶಿಕ್ಷಣವು ವಿದ್ಯಾರ್ಥಿಗಳ ಜೀವನದ ಅತ್ಯಂತ ಮಹತ್ವದ ಘಟ್ಟವಾಗಿದೆ. ಸಮಯದ ಸದ್ಬಳಕೆ ಮಾಡಿಕೊಂಡು ಶ್ರದ್ಧೆಯಿಂದ ವ್ಯಾಸಂಗ ಮಾಡಿದರೆ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಬಹುದು. ವಿದ್ಯಾರ್ಥಿಗಳು ಕಾಲೇಜು, ಪೋಷಕರು ಹಾಗೂ ಸಮಾಜಕ್ಕೆ ಕೀರ್ತಿ ತರಬೇಕು" ಎಂದು ಕರೆ ನೀಡಿದರು

ಮುಖ್ಯ ಅತಿಥಿಗಳಿಂದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಶ್ರೀ ಸಿದ್ದನಗೌಡ ಮಾಲಿ ಪಾಟೀಲ (ಬಾಗೂರು) ಅವರು ಮಾತನಾಡಿ, ವಿದ್ಯಾರ್ಥಿಗಳ ಜೀವನದಲ್ಲಿ ಶಿಸ್ತು ಅತ್ಯಗತ್ಯ. ಪೋಷಕರು ಕಷ್ಟಪಟ್ಟು ಮಕ್ಕಳನ್ನು ಓದಿಸುತ್ತಿದ್ದು, ಮಕ್ಕಳು ಉತ್ತಮ ವಿದ್ಯಾಭ್ಯಾಸ ಮಾಡಿ ಅವರ ಹೆಸರು ತರಬೇಕು ಎಂದರು.

ನಿವೃತ್ತ ಪ್ರಾಚಾರ್ಯ ಶ್ರೀ ಉಮೇಶ್ ಹೆಸರೂರು ಅವರು, ಮಾತನಾಡಿ ಕಠಿಣ ಪರಿಶ್ರಮ ಮತ್ತು ಗುರಿಯೊಂದಿಗೆ ವ್ಯಾಸಂಗ ಮಾಡಿದರೆ ಜೀವನದಲ್ಲಿ ಯಶಸ್ಸು ಸಾಧಿಸಬಹುದು ಎಂದು ತಿಳಿಸಿದರು. ಅತಿಥಿಗಳಿಂದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಸಿಡಿಎಂಸಿ ಉಪಾಧ್ಯಕ್ಷ ಶ್ರೀ ಗುರು ತೋಟದ ಅವರು, ಮಾತನಾಡಿ ಜಾಲಹಳ್ಳಿ ಶಾಲೆಯಲ್ಲಿ ಓದಿದ ಅನೇಕ ವಿದ್ಯಾರ್ಥಿಗಳು ಇಂದು ಉನ್ನತ ಅಧಿಕಾರಿಗಳಾಗಿದ್ದಾರೆ. ನೂತನ ವಿದ್ಯಾರ್ಥಿಗಳು ಕೂಡ ಅದೇ ರೀತಿಯಲ್ಲಿ ಸಾಧನೆ ಮಾಡಬೇಕು ಎಂದು ಪ್ರೋತ್ಸಾಹಿಸಿದರು. ಪತ್ರಕರ್ತ ಶ್ರೀ ಮೌನೇಶ್ ಜಾಲಹಳ್ಳಿ ಅವರು



ಮಾತನಾಡಿ ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡಿ ಕಾಲೇಜಿಗೆ ಉತ್ತಮ ಹೆಸರು ತರಬೇಕು ಎಂದು ಕರೆ ನೀಡಿದರು.

ಭೂದಾನಿಗಳು ಹಾಗೂ ಸಾಧಕರಿಗೆ ಸನ್ಮಾನ ಕಾಲೇಜಿಗೆ ಜಾಗವನ್ನು ದಾನವಾಗಿ ನೀಡಿದ ಉದಾರ ಮನಸ್ಸಿನ ಶ್ರೀ ಅಮರೇಶ ತಂದೆ ನೀಲಕಂಠಪ್ಪ ಮೇಣಸಿನಕಾಯಿ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಇದೆ ವೇಳೆ ಜಾಲಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಹನುಮಂತಿ ಶಿವಬಸಪ್ಪ ರಾಮ್ ಪಾಳಿ ಅವರಿಗೆ ಸನ್ಮಾನ ಮಾಡಲಾಯಿತು, ಜಾಲಹಳ್ಳಿ ಪದವಿ ಕಾಲೇಜಿನ ಪ್ರಾಚಾರ್ಯ ಶ್ರೀ ಪ್ರಭುಲಿಂಗ ಸಪಲಿ, ಶ್ರೀಸಿದ್ದನಗೌಡ ಮಾಲಿ ಪಾಟೀಲ (ಬಾಗೂರು)ನೈಜ ದೆಸೆ ಕನ್ನಡ ದಿನಪತ್ರಿಕೆಯ ಪತ್ರಕರ್ತ ಖಾಜಾ ಹುಸೇನ್ ಬಾಬಾ ಜಾಲಹಳ್ಳಿ, ಹಾಗೂ ದುರ್ಗಶ್ರೀ ಪ್ರಶಸ್ತಿ ಪುರಸ್ಕೃತರಾದ ಪತ್ರಕರ್ತ ಮೌನೇಶ್ ಜಾಲಹಳ್ಳಿ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವ 2025?26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ನಗದು ಬಹುಮಾನ ವಿತರಿಸಲಾಯಿತು.

- ಶ್ರೀದೇವಿ ಶರಣಪ್ಪ (ಜಾಲಹಳ್ಳಿ) ? 564 ಅಂಕಗಳೊಂದಿಗೆ ಕಾಲೇಜಿಗೆ ಪ್ರಥಮ ಸ್ಥಾನ. ರಾಜ್ಯಶಾಸ್ತ್ರದಲ್ಲಿ 99/100 ಹಾಗೂ ಸಮಾಜಶಾಸ್ತ್ರದಲ್ಲಿ 99/100 ಅಂಕ ಗಳಿಸಿದ್ದರು. ಕಾಲೇಜಿನಿಂದ ?1,500 ಹಾಗೂ ನಿವೃತ್ತ ಪ್ರಾಂಶುಪಾಲರಾಧ ಉಮೇಶ್ ಹೆಸರೂರು ಅವರಿಂದ ?3,000 ನಗದು ಬಹುಮಾನ ನೀಡಿ ಗೌರವಿಸಲಾಯಿತು.
- ಪವಿತ್ರಾ ಬಸವರಾಜ್ ಬಂಡಿ (ಜಾಲಹಳ್ಳಿ) ? ಕಾಲೇಜಿಗೆ ದ್ವಿತೀಯ ಸ್ಥಾನ. ಕನ್ನಡ ವಿಷಯದಲ್ಲಿ 100/100 ಅಂಕ ಗಳಿಸಿದ್ದು, ಕಾಲೇಜು ಹಾಗೂ ನಿವೃತ್ತಪ್ರಾಂಶುಪಾಲರಾಧ ಉಮೇಶ್ ಹೆಸರೂರು ಅವರಿಂದ ?2,000 ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು.
- ಪೂರ್ಣಿಮಾ (ಜಾಲಹಳ್ಳಿ) ? 544 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದು ಕಾಲೇಜಿನ ವತಿಯಿಂದ ಗೌರವಿಸಲಾಯಿತು.

**ನಿವೃತ್ತ ಮುಖ್ಯೋಪಾಧ್ಯಾಯ ಶ್ರೀ ಶಿವಪ್ರಕಾಶ್ ಅವರು, ಮಾತನಾಡಿ ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಪುಸ್ತಕ ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.**

**ಅವರು ಹೇಳಿದ ಸಂದೇಶ ಎಲ್ಲರ ಗಮನ ಸೆಳೆಯಿತು:**

**ವಿ"ಮೊಬೈಲ್ ಹೇಳುತ್ತದೆ ? ನನ್ನನ್ನು ತಲೆ ತಗ್ಗಿಸಿ ನೋಡು, ನಾನು ನಿನಗೆ ತಲೆ ತಗ್ಗಿಸುವಂತೆ ಮಾಡುತ್ತೇನೆ.**
**ಪುಸ್ತಕ ಹೇಳುತ್ತದೆ ? ನನ್ನನ್ನು ತಲೆ ತಗ್ಗಿಸಿ ಓದು, ನಾನು ನಿನಗೆ ತಲೆ ಎತ್ತುವಂತೆ ಮಾಡುತ್ತೇನೆ."ಹಿಪುಸ್ತಕ ಓದುವದು ಕಡೆ ಹೆಚ್ಚು ಗಮನ ಹರಿಸಿ ಎಂದು ಹೇಳಿದರು**

ಇದರ ಜೊತೆಗೆ ಸಂಸ್ಕೃತ ವಿಭಾಗ ಹಾಗೂ ಕ್ರೀಡಾಕೂಟಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೂ ಪ್ರಶಸ್ತಿ ಹಾಗೂ ಬಹುಮಾನಗಳನ್ನು ವಿತರಿಸಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮಗಳ ಸಂಭ್ರಮ ಕಾರ್ಯಕ್ರಮದ ಬಳಿಕ ವಿದ್ಯಾರ್ಥಿಗಳಿಂದ ನೃತ್ಯ, ನಾಟಕ, ಗಾಯನ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ನೂತನ ವಿದ್ಯಾರ್ಥಿಗಳು ಮತ್ತು ಹಿರಿಯ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ತಂದರು. ಉಪಸ್ಥಿತಿ ಕಾರ್ಯಕ್ರಮದಲ್ಲಿಜಾಲಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಹನುಮಂತಿ ಶಿವಬಸಪ್ಪ ರಾಮ್ ಪಾಳಿ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಶ್ರೀ ಸುರೇಶ್ ವಿಭೂತಿ ಅವರು ಜಾಲಹಳ್ಳಿ ಪದವಿ ಕಾಲೇಜಿನ ಪ್ರಾಚಾರ್ಯ ಶ್ರೀ ಪ್ರಭುಲಿಂಗ ಸಪಲಿ, ನಿವೃತ್ತ ಪ್ರಾಂಶುಪಾಲ ಉಮೇಶ್ ಹೆಸರೂರು,ನಿವೃತ್ತ ಮುಖ್ಯೋಪಾಧ್ಯಾಯ ಶ್ರೀ ಶಿವಪ್ರಕಾಶ್, ಶ್ರೀಸಿದ್ದನಗೌಡ ಮಾಲಿ ಪಾಟೀಲ (ಬಾಗೂರು) ನೈಜ ದೆಸೆ ಕನ್ನಡ ದಿನಪತ್ರಿಕೆಯ ಪತ್ರಕರ್ತ ಖಾಜಾ ಹುಸೇನ್ ಬಾಬಾ ಜಾಲಹಳ್ಳಿ, ಹಾಗೂ ದುರ್ಗಶ್ರೀ ಪ್ರಶಸ್ತಿ ಪುರಸ್ಕೃತರಾದ ಪತ್ರಕರ್ತ ಮೌನೇಶ್ ಜಾಲಹಳ್ಳಿ .

ಸರ್ಕಾರಿ ಬಾಲಕರ ಪ್ರೌಢಶಾಲೆಯ ಮುಖ್ಯಗುರು ನಿಂಗಪ್ಪ, ಇಂಗ್ಲಿಷ್ ಉಪನ್ಯಾಸಕ ಶೇಖರ್, ಸಿಡಿಎಂಸಿ ಉಪಾಧ್ಯಕ್ಷ ಶ್ರೀ ಗುರು ತೋಟದ ಬಾಬುಮಿಯಾ ಟೇಲರ್, ಹಿರಿಯ ಉಪನ್ಯಾಸಕರಾದ ವಿರೂಪಣ್ಣ, ಬಸವರಾಜ್, ಪ್ರಕಾಶ್, ಚನ್ನಬಸವ, ಬಸವರಾಜ್ ಸೋಮನಂಬರಡಿ, ಹನುಮೇಶ್, ಪೂರ್ಣಿಮಾ ಮೇಡಂ ಸೇರಿದಂತೆ ಉಪನ್ಯಾಸಕ ವೃಂದ, ಸಿಬ್ಬಂದಿ, ಗಣ್ಯರು, ವಿದ್ಯಾರ್ಥಿಗಳು ಹಾಗೂ ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದ ನಿರೂಪಣೆ ಹಾಗೂ ವಂದನಾರ್ಪಣೆಯನ್ನು ಉಪನ್ಯಾಸಕ ಬಸವರಾಜ್ ರಸ್ತಾಪುರ್ ಅವರು ನೆರವೇರಿಸಿದರು.

### ಅಧ್ಯಕ್ಷೀಯ ಭಾಷಣ

**ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಶ್ರೀ ಸುರೇಶ್ ವಿಭೂತಿ ಅವರು ಮಾತನಾಡಿ, ಜಾಲಹಳ್ಳಿ ಕಾಲೇಜು ಇಂದು ಉತ್ತಮ ಮಟ್ಟಕ್ಕೆ ಬೆಳೆಯಲು ನಿವೃತ್ತ ಪ್ರಾಂಶುಪಾಲ ಉಮೇಶ್ ಹೆಸರೂರು ಅವರ ಸೇವೆ ಮತ್ತು ದೂರದೃಷ್ಟಿಯೇ ಪ್ರಮುಖ ಕಾರಣವಾಗಿದೆ ಎಂದು ಹೇಳಿದರು. 2006ರಲ್ಲಿ ಆರಂಭವಾದ ಕಾಲೇಜಿನ ಬೆಳವಣಿಗೆಯಲ್ಲಿ ಅವರ ಕೊಡುಗೆಯನ್ನು ಸ್ಮರಿಸಿದರು.**



OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101